MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com | Yuva Marga | yuva_marga_

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 90 | ಶನಿವಾರ : 24-01-2026 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 90 | SATURDAY : 24-01-2026 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಾಯಚೂರು ಉತ್ಸವದ ಪ್ರಚಾರಾರ್ಥ ಸಹಿ ಅಭಿಯಾನಕ್ಕೆ ಚಾಲನೆ





ಯುವಮಾರ್ಗ ಸುದ್ದಿ

**ರಾಯಚೂರು ಜ.23–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಫೆ.5ರಿಂದ ಫೆ.7ರವರೆಗೆ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಪ್ರಚಾರಾರ್ಥ ಜನವರಿ 23ರಂದು ಸಹಿ ಅಭಿಯಾನ ಆರಂಭಗೊಂಡಿತು.

ರಾಯಚೂರು ಸಿಟಿಯ ಎಲ್ ವಿಡಿ ಕಾಲೇಜಿನ ಹತ್ತಿರ ಇರುವ ಸರಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಬೆಳಗ್ಗೆ ನಡೆದ ಸಹಿ ಅಭಿಯಾನಕ್ಕೆ ರಾಯಚೂರು ಮಹಾನಗರ ಪಾಲಿಕೆಯ ಉಪ ಆಯುಕ್ತರು ಹಾಗೂ ಪ್ರಚಾರ ಸಮಿತಿಯ ಅಧ್ಯಕ್ಷರಾದ ಸಂತೋಷ್ ರಾಣಿ ಅವರು ಚಾಲನೆ ನೀಡಿದರು.

ಈ ವೇಳೆ, ಸಂತೋಷರಾಣಿ ಅವರು ಮಾತನಾಡಿ, ರಾಯಚೂರು ಉತ್ಸವದಲ್ಲಿ ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಸಕ್ರಿಯ ಭಾಗಿಯಾಗ ಬೇಕು. ಈ ಸಂಬಂಧ ವ್ಯಾಪಕವಾಗಿ ಜನತೆಗೆ ಮಾಹಿತಿ ರವಾನಿಸಲು ಸಹಿ ಅಭಿಯಾನ ಹಮ್ಮಿಕೊಂಡಿದ್ದೇವೆ ಎಂದು ತಿಳಿಸಿದರು. ಕಾಲೇಜಿನ ಪ್ರಾಚಾರ್ಯರಾದ ಶಿವಕುಮಾರ ಅವರು ಮಾತನಾಡಿ, ಇದು ನಮ್ಮೂರ ಉತ್ಸವ ಎಂದು ಭಾವಿಸಿ ವಿದ್ಯಾರ್ಥಿಗಳೊಂದಿಗೆ ತಪ್ಪದೇ ಭಾಗಿಯಾಗುವುದಾಗಿ ತಿಳಿಸಿದರು. ಪ್ರಚಾರ ಸಮಿತಿಯ ಸದಸ್ಯ ಕಾರ್ಯದರ್ಶಿ ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಅವರು ಮಾತನಾಡಿ, ಬಹುವರ್ಷಗಳ ನಂತರ ರಾಯಚೂ ರು ಉತ್ಸವ ನಿಗದಿಯಾಗಿದೆ. ಉತ್ಸವದಲ್ಲಿ ಕೃಷಿ ಮೇಳ, ಮತ್ಸ್ಯಮೇಳ, ಫಲಪುಷ್ಪ ಪ್ರದರ್ಶನ ಸೇರಿ ದಂತೆ ನಾನಾ ಕಾರ್ಯಕ್ರಮಗಳು ಮತ್ತು ಸ್ಥಳೀಯ ಹಾಗೂ ರಾಜ್ಯಮಟ್ಟದ ಕಲಾವಿದರಿಂದ ಪ್ರತಿ ದಿನ ಹಾಡು, ನೃತ್ಯ ಸೇರಿದಂತೆ ಅದ್ದೂರಿ ಕಾರ್ಯಕ್ರಮ ಗಳು ನಡೆಯಲಿವೆ. ವೆಬ್ ಸೈಟ್ ಸೇರಿದಂತೆ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರ ಕಾರ್ಯ ನಡೆಸಿದ್ದು ವಿದ್ಯಾರ್ಥಿಗಳು ತಪ್ಪದೆ ಹಾಜರಾಗಬೇಕು ಎಂದು ಮನವಿ ಮೂಡಿದರು.

ಈ ಸಂದರ್ಭದಲ್ಲಿ ಪ್ರಚಾರ ಸಮಿತಿಯ ಸದಸ್ಯರಾದ ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳಾದ ಸದಾಶಿವಪ್ಪ, ಪಾಲಿಕೆಯ ಅಧಿಕಾರಿಗಳಾದ ಕೃಷ್ಣ ಕಟ್ಟಿಮನಿ, ಅರಣ್ಯ ಇಲಾಖೆಯ ನಾಗರಾಜ್, ಗ್ರಂಥಾಲಯ ಇಲಾಖೆಯ ಮರೆಪ್ಪ, ರಾಜ್ಯ ಸರ್ಕಾರಿ ನೌಕರರ ವಿಮಾ ಇಲಾಖೆಯ ವಿಕ್ರಾಂತ ಇನ್ನಿತರ ಸದಸ್ಯರು ಹಾಗೂ ಕಾಲೇಜಿನ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಇದ್ದರು.

## ತಮ್ಮ ಅಕ್ರಮ ಮುಚ್ಚಿಕೊಳ್ಳಲು ವಿಬಿ ಜಿ ರಾಮ್ ಜಿ ಬಗ್ಗೆ ಕಾಂಗ್ರೆಸ್ ಚರ್ಚೆ : ಹೆಚ್ಡಿಕೆ



**ಮಂಡ್ಯ,ಜ.23–** ರಾಜ್ಯಪಾಲರ ವಿರುದ್ಧ ಗೋ ಬ್ಯಾಕ್ ಗೋ ಬ್ಯಾಕ್ ಎನ್ನುತ್ತಿರುವ ರಾಜ್ಯ ಕಾಂಗ್ರೆಸ್ ಏನು ಸಾಧಿಸುವುದಿಲ್ಲ. ಗೋ ಬ್ಯಾಕ್ ಗವರ್ನರ್ ಅನ್ನೋದು ಕೇವಲ ರಾಜಕೀಯ ನಾಟಕ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದರು.ಬದಲಿಗೆ ಕಳೆದ ಎರಡೂ ಮುಕ್ಕಾಲು ವರ್ಷಗಳಲ್ಲಿ ನಡೆಸಿರುವ ಅನ್ಯಾಯ, ಅಕ್ರಮಗಳನ್ನು ಮರೆಮಾಚಲು ವಿಬಿ ಜಿ ರಾಮ್ ಜಿ ಯೋಜನೆಯ ಬಗ್ಗೆ ಕಾಂಗ್ರೆಸ್ ಸರ್ಕಾರ ಅಪಪ್ರಚಾರ ಮಾಡುತ್ತಿದೆ ಎಂದು ಅವರು ದೂರಿದರು.

ಮೇಲುಕೋಟೆ ವಿಧಾನಸಭೆ ಕ್ಷೇತ್ರದ ಶಿವಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಶ್ರೀ ಮಾರಮ್ಮ ದೇವಿ ದೇವಾಲಯ ಉದ್ಘಾಟನೆ ನಂತರ ಕೇಂದ್ರ ಸಚಿವರು ಮಾಧ್ಯಮಗಳ ಜತೆ ಮಾತನಾಡಿದರು.

ಈ ಹಿಂದೆ ಕಾಂಗ್ರೆಸ್ ರಾಜ್ಯಪಾಲರುಗಳ ವಿಷಯದಲ್ಲಿ ಹೇಗೆ ನಡೆದುಕೊಂಡಿತ್ತು ಎಂಬುದರ ಬಗ್ಗೆ ಒಮ್ಮೆ ನೆನಪು ಮಾಡಿಕೊಂಡರೆ ಅವರ ಬಣ್ಣ ಏನೆಂದು ಗೊತ್ತಾಗುತ್ತದೆ. ವಿಶೇಷ ಅಧಿವೇಶನ ಕರೆದು ಅಲ್ಲಿ ಸಮಯ ಪೋಲು ಮಾಡುತ್ತಿದ್ದಾರೆ. ರಾಜ್ಯಪಾಲರು ಭಾಷಣ ಓದದಿರುವ ಅಥವಾ ಮೊಟಕುಗೊಳಿಸಿರುವ ಘಟನೆ ಇದೇ ಮೊದಲ ಬಾರಿ ನಡೆದಿದ್ದು ಅಲ್ಲ. ಜೆ.ಹೆಚ್. ಪಟೇಲರು ಸಿಎಂ ಆಗಿದ್ದಾಗ ಡಿಸಿಎಂ ಆಗಿದ್ದ ಸಿದ್ದರಾಮಯ್ಯ ಅವರು ಅಂದಿನ ಸಂದರ್ಭವನ್ನು ನೆನಪು ಮಾಡಿಕೊಳ್ಳಬೇಕು. ಈಗ ನೋಡಿದರೆ ಅನಗತ್ಯವಾಗಿ ವಿಧಾನಸಭೆ ಕಲಾಪದಲ್ಲಿ ಸಂಘರ್ಷ ನಡೆಯುತ್ತಿದೆ.ಈ ಸಂಘರ್ಷಗಳಿಂದ ರಾಜ್ಯದ ಸಮಸ್ಯೆಗಳಿಗೆ ಪರಿಹಾರ ಸಿಗುತ್ತದಾ? ಗೋ ಬ್ಯಾಕ್ ಗವರ್ನರ್ ಅನ್ನೋದು ಕೇವಲ ರಾಜಕೀಯ ನಾಟಕ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು.

ಮನರೇಗಾ ವಿಷಯ ಇಟ್ಟಿಕೊಂಡು ಕೇಂದ್ರ ಸರ್ಕಾರವನ್ನು ನಿಂದಿಸುವುದು ಈ ಸರ್ಕಾರದ ಉದ್ದೇಶ. ಅದಕ್ಕಾಗಿಯೇ ವಿಶೇಷ ಅಧಿವೇಶನ ಕರೆದಿದ್ದಾರೆ ಎಂದ ಕೇಂದ್ರ ಸಚಿವರು; ಪದೇ ಪದೇ ದಲಿತರ ಹೆಸರು ಬಳಸಿ ತಮ್ಮ ಸ್ಥಾನಮಾನ ಗಟ್ಟಿಗೊಳಿಸುವ ಪ್ರಯತ್ನದಲ್ಲಿದ್ದಾರೆ. ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಜಾತಿ, ವರ್ಗದ ಜನರಿಗೆ ಮೀಸಲಿಟ್ಟಿದ್ದ ಹಣವನ್ನು ಗ್ಯಾರಂಟಿಗಳಿಗೆ ಬಳಸಿದ್ದಾರೆ. ಇದು ದಲಿತರ ಉದ್ಧಾರವೇ? ಎಂದು ಕಿಡಿಕಾರಿದರು.

ಈ ಸರ್ಕಾರದಲ್ಲಿ ಹಲವಾರು ಅಕ್ರಮಗಳು ನಡೆದಿದೆ. ಕಾನೂನು ಬಾಹಿರ ನಿರ್ಧಾರಗಳ ಬಗ್ಗೆ ರಾಜ್ಯಪಾಲರು ಕ್ರಮ ಕೈಗೊಳ್ಳುವ ಅವಕಾಶ ಇದ್ದರೂ ರಾಜ್ಯಪಾಲರು ಬೇರೆ ರಾಜ್ಯಗಳ ರಾಜ್ಯಪಾಲರ ರೀತಿ ನಮ್ಮ ಸರ್ಕಾರದ ಜತೆ ಸಂಘರ್ಷ ಮಾಡಲಿಲ್ಲ. ಅದನ್ನು ಈ ಸರಕಾರ ಅರ್ಥ ಮಾಡಿಕೊಂಡಿಲ್ಲ. ಕೇಂದ್ರ ಸರ್ಕಾರದ ಜತೆ ರಾಜ್ಯ ಸರ್ಕಾರ ವಿಶ್ವಾಸದಲ್ಲಿ ಇಲ್ಲ. ಕೇಂದ್ರದ ಅನುದಾನದ ಬಗ್ಗೆ ರಾಜ್ಯ ಸರ್ಕಾರ ಪಾರದರ್ಶಕವಾಗಿ ಮಾಡಿಕೊಂಡಿಲ್ಲ. ಇವರ ತಪ್ಪಿನಿಂದ ಕೆಲ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ವಾಪಸ್ ಹೋಗಿವೆ. ಇದಕ್ಕೆ ಹೊಣೆ ಯಾರು? ಎಂದು ಅವರು ಪ್ರಶ್ನಿಸಿದರು.

ರೈತರಿಗೆ ಈ ಸರಕಾರ ಸರಣಿ ಅನ್ಯಾಯ ಮಾಡಿದೆ. ಬೆಳೆ ಬೆಳೆದ ರೈತರನ್ನ ಇವರು ಕಾಪಾಡಿದ್ದೀರಾ? ಕೇಂದ್ರ ಸರ್ಕಾರ ಅನುಮತಿ ಕೊಟ್ಟ ಮಾನದಂಡದಲ್ಲಿ ಎಷ್ಟು ಬೆಳೆ ಖರೀದಿ ಮಾಡಿದ್ದೀರಿ ಎಂಬುದನ್ನು ಹೇಳಲಿ? ಮಾವಿನ ಬೆಲೆ ಕುಸಿದಾಗ ಕೇಂದ್ರ ಸರ್ಕಾರದ ಮುಂದೆ ಇವರು ಅರ್ಜಿ ಹಿಡಿದುಕೊಂಡು ಹೋಗಿದ್ದರು. ನಾನು ಸಿಎಂ ಆಗಿದ್ದಾಗ ಮಾವು (2ನೇ ಪುಟಕ್ಕೆ>>>)

## ರಾಷ್ಟ್ರಧ್ವಜಕ್ಕೆ ಅವಮಾನ ಆರೋಪ ಪಿಡಿಓ ವಿರುದ್ಧ ಕ್ರಮಕ್ಕೆ ಆಗ್ರಹ

ಯುವಮಾರ್ಗ ಸುದ್ದಿ

**ಲಿಂಗಸುಗೂರು,ಜ.23–** ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿ ರಾಷ್ಟ್ರಧ್ವಜಕ್ಕೆ ಅವಮಾನ ಮಾಡಿದ ಆರೋಪದಡಿ ಸರ್ಜಾಪುರ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಶೋಭಾ ರಾಣಿ ವಿರುದ್ಧ ತನಿಖೆ ನಡೆಸಿ ಅಮಾನತ್ತು ಮಾಡಿ ಆದೇಶ ಹೊರಡಿಸಬೇಕೆಂದು ಆಗ್ರಹಿಸಿ ಕರ್ನಾಟಕ ಜನಜಾಗೃತಿ ಸಮಿತಿಯ ತಾಲ್ಲೂಕು ಘಟಕದ ಅಧ್ಯಕ್ಷ ಕಿರಣಕುಮಾರ ಚಿಕ್ಕಹೆಸರೂರು ನೇತೃತ್ವದಲ್ಲಿ ಸಹಾಯಕ ಆಯುಕ್ತರ ಕಚೇರಿ ಸಿಬ್ಬಂದಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ತಾಲ್ಲೂಕಿನ ಸರ್ಜಾಪುರ ಗ್ರಾಮ ಪಂಚಾಯತಿಗೆ ಸಂಬಂಧಿಸಿದ ದಾಖಲೆಗಳನ್ನು ಮಾಹಿತಿ ಹಕ್ಕು ಕಾಯ್ದೆಯಡಿ ಕೇಳಿದರೂ ಅಭಿವೃದ್ಧಿ ಅಧಿಕಾರಿಗಳು ಸ್ಪಂದಿಸಿಲ್ಲ. ಈ ಹಿನ್ನಲೆ 20-01-2026 ಪಂಚಾಯಿತಿಗೆ ಭೇಟಿ ನೀಡಿದಾಗ ಅಭಿವೃದ್ಧಿ ಅಧಿಕಾರಿ ಗೈರುಹಾಜರಾಗಿದ್ದು ಕಂಡುಬಂದಿದೆ. ರಜೆ ಅಥವಾ ಯಾವುದೇ ಮಾಹಿತಿಯನ್ನು ನೀಡದೆ ಉಡಾಫೆ ಉತ್ತರ ನೀಡಿರುವುದು ಅನುಮಾನಕ್ಕೆ ಕಾರಣವಾಗಿದೆ.



ಪಂಚಾಯತ್ ಕಚೇರಿಯೊಳಗೆ ರಾಷ್ಟ್ರಧ್ವಜವನ್ನು ರಟ್ಟಿನ ಬಾಕ್ಸಲ್ಲಿ ಕೆಳಗೆ ನಿರ್ಲಕ್ಷ್ಯದಿಂದ ಇಡಲಾಗಿದ್ದು, ಇದು ರಾಷ್ಟ್ರಧ್ವಜಕ್ಕೆ ಅವಮಾನ ಕಾಯ್ದೆ-1971ರ ಉಲ್ಲಂಘನೆ ಎಂದು ಸಂಘಟನೆಯ ಕಾರ್ಯಕರ್ತರು ಆರೋಪಿಸಿದ್ದು ಸಂಬಂಧಿಸಿದ ಅಧಿಕಾರಿಗಳ ಬಯೋಮೆಟ್ರಿಕ್, ಸಿಸಿ ಕ್ಯಾಮೆರಾ ದೃಶ್ಯಗಳ ಮೂಲಕ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ಜನಜಾಗೃತಿ ಸಮಿತಿಯ ಕಾರ್ಯಕರ್ತರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲ್ಲೂಕು ಉಪಾಧ್ಯಕ್ಷ ಪ್ರದೀಪ ಚಿಕ್ಕೆಸರೂರ, ಹುಲುಗಪ್ಪ ಕೆಸರಹಟ್ಟಿ, ಚಿನ್ನಪ್ಪ ಮುದಗಲ್, ದಯಾನಂದ ಹಟ್ಟಿ, ರಮೇಶ ಕಟ್ಟಿಮನಿ, ನಾಗರಾಜ ಮಾವಿನಭಾವಿ, ಮೌನೇಶ, ಅಮರೇಶ, ಚಿದಾನಂದ, ಪ್ರವೀಣ, ರಾಜು, ಸಿದ್ದಪ್ಪ ಸೇರಿದಂತೆ ಇದ್ದರು.

### ಕಲ್ಮಠ ಪ್ರಾಥಮಿಕ ಶಾಲೆಯಲ್ಲಿ ಪರಾಕ್ರಮ ದಿನ ಆಚರಣೆ

## ನೇತಾಜಿಯವರ ಧೈರ್ಯ,ಶೌರ್ಯ ಯುವಕರಿಗೆ ಮಾದರಿ –ಜಗದೀಶ್ ಎಂ



ಯುವಮಾರ್ಗ ಸುದ್ದಿ

**ಮಾನ್ವಿ,ಜ.23–** ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಧೈರ್ಯ, ಶೌರ್ಯ, ಸಾಹಸ, ದಿಟ್ಟತನ ಯುವಕರಿಗೆ ಆದರ್ಶನೀಯ.

ಎಂದು ಕಲ್ಮಠ ಶಾಲೆ ಹಳೆ ವಿದ್ಯಾರ್ಥಿ ಹಾಗೂ ಗಬ್ಬೂರು ಶಾಖೆಯ ವಿರೂಪಾಕ್ಷೇಶ್ವರ ಪತ್ತಿನ ಸೌಹಾರ್ದ ಸರಕಾರಿ ಸಂಘ ನಿಯಮಿತದ ಶಾಖಾ ವ್ಯವಸ್ಥಾಪಕ ಜಗದೀಶ್ ಎಂ. ಹೇಳಿದರು

ಅವರು ಶುಕ್ರವಾರ ಪಟ್ಟಣದ ಕಲ್ಮಠ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ನೇತಾಜಿ ಸುಭಾಷ್ ಚಂದ್ರ ಬೋಸ್ ರವರ ಜನ್ಮದಿನ ಹಾಗೂ ಪರಾಕ್ರಮ ದಿವಸ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ನಾವು ಸಹ ಪರಾಕ್ರಮಿಗಳಾಗಿ, ದೇಶವನ್ನು ಜಗತ್ತಿನಲ್ಲಿ ಪ್ರಜ್ವಲಿಸುವಂತೆ ಮಾಡಬೇಕಾದ ಅಗತ್ಯವಿದೆ. ಗುರುಗಳು, ಹೆತ್ತವರು, ಹಿರಿಯರು ಹೇಳಿದ ಮಾತುಗಳನ್ನು ಕೇಳಿ ಸಂಸ್ಕಾರವಂತರಾಗಿ ಕಲಿತ ಶಾಲೆಗೆ ಬೆಳೆಸಿದ ಹೆತ್ತವರಿಗೆ ಕೀರ್ತಿ ತರಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕಲ್ಮಠ ಪ್ರೌಢಶಾಲಾ ಶಿಕ್ಷಕ ಎಂ.ಎಂ. ಹಿರೇಮಠ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಮುಖ್ಯೋಪಾಧ್ಯಾಯಮಂಜುನಾಥ್ ಕಮತರ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.ಶಿಕ್ಷಕಿ ಜಯಶ್ರೀ, ಪ್ರಶಿಕ್ಷಣಾರ್ಥಿ ಮಹಾದೇವಿ ವೇದಿಕೆಯಲ್ಲಿ ಉಪಸ್ಥಿತರಿದ್ದರು

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಕೇಮ್ಯಾ ನಾಯ್ಕ ,ರವಿ ಹುಲಿಯಾಪುರ್, ಮಹಾಂತಮ್ಮ, ರೂಪ, ಸೌಮ್ಯ, ಪವಿತ್ರಾ ,ರಿಜ್ವಾನ ಬೇಗವ್ ಭಾಗವಹಿಸಿದ್ದರು.

ವಿದ್ಯಾರ್ಥಿಗಳಾದ ಪವಿತ್ರ ಹಿರೇಮಠ, ವಡ್ಡೆ ಅನುರಾಧ, ವೈಷ್ಣವಿ, ಸಿಂಚನಾ ಇನ್ನೂ ಹಲವು ವಿದ್ಯಾರ್ಥಿಗಳು ಸುಭಾಷ್ ಚಂದ್ರ ಬೋಸ್ ರವರ ಜೀವನ ಸಾಧನೆ ಕುರಿತು ಅನಿಸಿಕೆ ವ್ಯಕ್ತಪಡಿಸಿದರು

ಪ್ರಶಿಕ್ಷಣಾರ್ಥಿ ಚೈತ್ರ ಕಾರ್ಯಕ್ರಮ ನಿರೂಪಿಸಿದರು. ಹರ್ಷಿಯಾ ಸ್ವಾಗತಿಸಿದರು ಮಹಾದೇವಿ ವಂದಿಸಿದರು.

## ಜೀವೈಕ್ಯ ಶ್ರೀ ವಿಜಯರುದ್ರ ಮಹಾಸ್ವಾಮಿಗಳ 11 ನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ಪುರಾಣ ಪ್ರವಚನ

ಯುವಮಾರ್ಗ ಸುದ್ದಿ

**ಮಾನ್ವಿ,ಜ.23–** ತಾಲೂಕಿನ ಜಾನೆಕಲ್ ಗ್ರಾಮದಲ್ಲಿನ ಜೀವೈಕ್ಯ ಶ್ರೀ ವಿಜಯರುದ್ರ ಮಹಾಸ್ವಾಮಿಗಳ ಮಠದಲ್ಲಿ ಜೀವೈಕ್ಯ ಶ್ರೀ ವಿಜಯರುದ್ರ ಮಹಾಸ್ವಾಮಿಗಳ 11 ನೇ ವರ್ಷದ ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಯಮ್ಮಿಗನೂರು ಶ್ರೀ ಜಡೆಸಿದ್ದೇಶ್ವರ ಸ್ವಾಮಿ ಪುರಾಣ ಪ್ರವಚನ ಕಾರ್ಯಕ್ರಮವನ್ನು ರಾಯಚೂರಿನ ಸಾವಿರ ದೇವರ ಸಂಸ್ಥಾನ ಕಿಲ್ಲೇಬೃಹನ್ಮಠ ಶಾಂತಮಲ್ಲ ಶಿವಚಾರ್ಯ ಮಹಾಸ್ವಾಮಿಗಳು ಉದ್ಘಾಟಿಸಿ ಆರ್ಶೀವಚನ ನೀಡಿ ಜಾನೆಕಲ್ ಗ್ರಾಮದಲ್ಲಿ ಶ್ರೀ ವಿಜಯರುದ್ರ ಮಹಾಸ್ವಾಮಿಗಳು ಜೀವೈಕ್ಯರಾಗಿ ಗ್ರಾಮದ ಭಕ್ತರನ್ನು ಉದ್ದಾರ ಮಾಡುತ್ತಿದ್ದಾರೆ ಹಾಗೂ ಅನೇಕ ಲೀಲೆಗಳನ್ನು ತೋರುತ್ತ ಭಕ್ತರನ್ನು ಧರ್ಮ ಮಾರ್ಗದಲ್ಲಿ ನಡೆಯುವಂತೆ ಶ್ರೀಗಳು ಅನುಗ್ರಹ ಮಾಡುತ್ತ ಬಂದಿದ್ದಾರೆ ಎಂದು ತಿಳಿಸಿದರು. ಕರೆಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು ಆರ್ಶೀವಚನ ನೀಡಿದರು.



ಯಮ್ಮಿಗನೂರು ಶ್ರೀ ಜಡೆಸಿದ್ದೇಶ್ವರ ಸ್ವಾಮಿ ಪುರಾಣ ಪ್ರವಚನವನ್ನು ಖರಾಬದಿನ್ನಿ ದೊಡ್ಡ ಬಸಯ್ಯಶಾಸ್ತ್ರಿ ,ಸಂಗೀತ ಸೇವೆಯನ್ನು ಶರಣಯ್ಯಸ್ವಾಮಿ ಸೋಮನಾಳ, ತಬಲವಾದನವನ್ನು ಆರ್.ಪಿ. ಮಲ್ಲಿನಾಥ ಸ್ವಾಮಿ ನೀಡಿದರು.

ಶ್ರೀಮಠದ ಸೂಗುರಯ್ಯಸ್ವಾಮಿ , ಶರಣಯ್ಯಸ್ವಾಮಿ, ಗ್ರಾ.ಪಂ.ಸದಸ್ಯರಾದ ಮೌನೇಶಗೌಡ, ಕಲ್ಯಾಣಬಸವ, ಗ್ರಾಮದ ಮುಖಂಡರಾದ ಬಸವರಾಜಪ್ಪ ಹೊಸಗೌಡರು,ಅಮರೇಗೌಡ ಪೊಲೀಸ್ ಪಾಟೀಲ್,ರಾಮನಗೌಡ ಪೊಲೀಸ್ ಪಾಟೀಲ್, ನಿಲ್ಲಪ್ಪಗೌಡ ಮಾಲಿಪಾಟೀಲ್, ದೊಡ್ಡಬಸವನಗೌಡ ಬಲ್ಲಟ್ಟಗಿ,ರುದ್ರಗೌಡ ಪೊಲೀಸ್ ಪಾಟೀಲ್ ಮಲ್ಲಿನ ಮಡುಗು.ಮಲ್ಲಿಕಾರ್ಜುನ ಹೋಸಗೌಡರು, ಅಯ್ಯಣ್ಣ ಕುಂಬರ , ಬಿ.ಶಂಕರಗೌಡ, ಅಮರೇಶನಾಯಕ ಗ್ರಾ.ಪಂ. ಸದಸ್ಯರು, ಚೆನ್ನಬಸವನಾಯಕ,ಮಲ್ಲೇಶಗೌಡ,ಚನ್ನಬಸವ ಹುಜ್ಜೇರ್,ಹನುಮಂತ ,ತಿಮ್ಮಪ್ಪನಾಯಕ , ರುದ್ರಪ್ಪನಾಯಕ, ಪಂಪಾಪತಿ ಗಾಳಿ ಸೇರಿದಂತೆ ಜಾನೆಕಲ್ ಹಾಗೂ ಮಲ್ಲಿಗೆ ಮಡವು ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ಭಕ್ತರು ಭಾಗವಹಿಸಿದರು.

# ಮೊದಲನೇಯ ಪುಟದಿಂದ

## ತಮ್ಮ ಅಕ್ರಮ ಮುಚ್ಚಿಕೊಳ್ಳಲು ವಿಬಿ ಜಿ ರಾಮ್ ಜಿ ಬಗ್ಗೆ ಕಾಂಗ್ರೆಸ್ ಚರ್ಚೆ : ಹೆಚ್ಡಿಕೆ

ಬೆಲೆ ಕುಸಿದಾಗ ರಾಜ್ಯ ಸರ್ಕಾರದ ವತಿಯಿಂದಲೇ ಹಣ ಕೊಟ್ಟೆ. ಇವರಿಗೆ ಕೆಲಸ ಮಾಡಲು ಆಗುತ್ತಿಲ್ಲ, ಆದರೆ ಕೇಂದ್ರವನ್ನು ನಿಂದಿಸಲು ನೆಪ ಹುಡುಕುತ್ತಾರೆ ಎಂದು ಕಟುವಾಗಿ ಟೀಕಿಸಿದರು.

ಸಂಘರ್ಷಗಳಿಂದ ಸಮಸ್ಯೆ ಬಗೆಹರಿಯಲ್ಲ. ಕೇಂದ್ರದ ಜತೆ ವಿಶ್ವಾಸದಲ್ಲಿದ್ದು ಸಮಸ್ಯೆ ಬಗೆಹರಿಸಿಕೊಳ್ಳಿ ಎಂದು ನಾನು ಸಲಹೆ ನೀಡುತ್ತೇನೆ. ಮಾತೆತಿದ್ದರೆ ದೊಡ್ಡ ಪ್ರಮಾಣದ ಟ್ಯಾಕ್ಸ್ ಕಟ್ಟುತ್ತಿದ್ದೇವೆ ಅಂತೀರಾ? ತೆರಿಗೆ ಕಟ್ಟುವವರು ಜನರು. ರಾಜ್ಯದ ಸಮಸ್ಯೆಗಳ ಬಗ್ಗೆ ಸದನದಲ್ಲಿ ಚರ್ಚೆಗಳಾಗಬೇಕು. ಅದನ್ನು ಬಿಟ್ಟು ಕೇವಲ ಹೈಡ್ರಾಮಾ ನಡೆಸಿದರೆ ಏನೂ ಆಗುವುದಿಲ್ಲ ಎಂದು ಅವರು ತರಾಟೆಗೆ ತೆಗೆದುಕೊಂಡರು.

ಕರ್ನಾಟಕ ರಾಜ್ಯವೇ ನನ್ನ ಪರಿಮಿತಿ:

ರಾಜ್ಯರಾಜಕರಣಕ್ಕೆ ಹೆಚ್ಡಿಕೆ ವಾಪಸ್ಸು ಬರುತ್ತೀರಾ ಎನ್ನುವ ಪ್ರಶ್ನೆಗೆ ಉತ್ತರಿಸಿದ ಅವರು; ಕರ್ನಾಟಕ ರಾಜ್ಯವೇ ನನ್ನ ಪರಿಮಿತಿ. ಜನರು ಎಲ್ಲಿ ಅಪೇಕ್ಷೆ ಮಾಡುತ್ತಾರೆ ಅಲ್ಲಿಂದ ನನ್ನ ಸ್ಪರ್ಧೆ ಮಾಡುತ್ತೇನೆ. ಮಂಡ್ಯದಿಂದ ಲೋಕಸಭೆ ಚುನಾವಣೆಗೆ ನಿಲ್ಲುವ ಉದ್ದೇಶ ಇರಲಿಲ್ಲ. ಪುಟ್ಟರಾಜು ಅವರನ್ನು ನಿಲ್ಲಿಸಬೇಕು ಎಂದುಕೊಂಡಿದ್ದೆ. ಅವತ್ತು ಅನಿವಾರ್ಯವಾಗಿ ನಾನು ಎಲೆಕ್ಷನ್ ಗೆ ನಿಂತೆ. ಸಂಸದನಾಗ್ತೀನಿ, ಕೇಂದ್ರ ಮಂತ್ರಿ ಆಗ್ತೀನಿ ಎಂದು ನನಗೆ ಗೊತ್ತಿರಲಿಲ್ಲ. ನಮ್ಮ ಪಕ್ಷದಿಂದ ಬೇರೆ ಪಕ್ಷಕ್ಕೆ ಹೋದವರು ಜೆಡಿಎಸ್ ಕಥೆ ಮುಗಿಯಿತು ಎಂದರು. ಆದರೆ, ನಮ್ಮ ಪಕ್ಷ ಯಾವ ರೀತಿಯಲ್ಲಿ ಗಟ್ಟಿಯಾಗುತ್ತಿದೆ ಎನ್ನುವುದು ಅವರಿಗೆ ಗೊತ್ತಿಲ್ಲ. ಕೆಲವರಿಗೆ ಜೆಡಿಎಸ್ ಪಕ್ಷದ್ದೇ ಯೋಚನೆ. ನಮ್ಮ ಪಕ್ಷವನ್ನು ಮುಗಿಸಬೇಕು ಎನ್ನುವುದೇ ಅವರ ಚಿಂತೆ ಎಂದು ಅವರು ಲೇವಡಿ ಮಾಡಿದರು.

ಕಾಂಗ್ರೆಸ್ ವಿರುದ್ಧ ಬಿಜೆಪಿ, ಜೆಡಿಎಸ್ ಒಗ್ಗಟ್ಟಿನ ಹೋರಾಟ:

ಸ್ಥಳೀಯ ಚುನಾವಣೆಯಲ್ಲಿ ಮೈತ್ರಿ ಇಲ್ಲ ಎಂಬ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರ ಹೇಳಿಕೆ ಬಗ್ಗೆ ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವ ಕುಮಾರಸ್ವಾಮಿ ಅವರು; ಕಾಂಗ್ರೆಸ್ ಕೆಟ್ಟ ಆಡಳಿತವನ್ನು ಕಿತ್ತೊಗೆಯಲು ಜೆಡಿಎಸ್- ಬಿಜೆಪಿ ಒಟ್ಟಾಗಿ ಹೋರಾಟ ನಡೆಸುತ್ತವೆ. ಈ ಹಿನ್ನಲೆಯಲ್ಲಿ ಜನರ ನಿರೀಕ್ಷೆಗೆ ತಕ್ಕಂತೆ ನಾವು ಮೈತ್ರಿ ಬಗ್ಗೆ ತೀರ್ಮಾನ ಮಾಡುತ್ತೇವೆ. ಸ್ಥಳೀಯ ಮಟ್ಟದಲ್ಲಿ ಪೈಪೋಟಿ ಇರುವುದು ಸಹಜ. ಎಲ್ಲಾ ಪಕ್ಷಗಳಲ್ಲಿ ಅದು ಇರುತ್ತದೆ. ಕಾರ್ಯಕರ್ತರು ಸ್ಥಾನಮಾನಕ್ಕಾಗಿ ಚರ್ಚೆ ಮಾಡುತ್ತಾರೆ. ಆ ಕುರಿತು ಅಂತಿಮವಾಗಿ ನಾವು ತೀರ್ಮಾನ ಮಾಡುತ್ತೇವೆ ಎಂದು ಕೇಂದ್ರ ಸಚಿವರು ಹೇಳಿದರು. ಮಾಜಿ ಸಚಿವರಾದ ಸಿ ಎಸ್ ಪುಟ್ಟರಾಜು ಅವರು ಇದ್ದರು.

## ಶಾಲಾ ವಿದ್ಯಾರ್ಥಿಗಳ ಆಹಾರ ಮೇಳ



ಯುವಮಾರ್ಗ ಸುದ್ದಿ

**ಗಿಲ್ಲೆಸೂಗೂರು,ಜ.23–** ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಗಿಲ್ಲೆಸೂಗೂರು ಶಾಲಾ ವಿದ್ಯಾರ್ಥಿಗಳಿಂದ ಆಹಾರಮೇಳ ಹಮ್ಮಿಕೊಂಡಿದ್ದು ಈ ಮೇಳದ ಮುಖ್ಯ ಗುರುಗಳಾದ ಈಶ್ವರಯ್ಯ ಅಚ್ಚುಕಟ್ಟಾಗಿ ನಡೆಸಿಕೊಟ್ಟಂತ ಎಲ್ಲಾ ವಿದ್ಯಾರ್ಥಿಗಳಿಂದ ಮೆಚ್ಚುಗೆಯನ್ನು ಪಡೆದರು ಈ ಮೇಳದಲ್ಲಿ ಚಿಕ್ಕ ಚಿಕ್ಕ ವ್ಯಾಪಾರಗಳ ಮೂಲಕ ಮೇಳವನ್ನ ಹಮ್ಮಿಕೊಂಡಿದ್ದು ರುಚಿರುಚಿಯಾದ ತಮ್ಮ ತಮ್ಮ ಆಹಾರಗಳ ಪದಾರ್ಥಗಳನ್ನು ಅಚ್ಚುಕಟ್ಟಾಗಿ ನಡೆಸಿಕೊಟ್ಟಂತಹ ಶಾಲಾ ವಿದ್ಯಾರ್ಥಿಗಳು ಕಾತರದಿಂದ ಉತ್ಸಾಹ ದಿಂದ ಪಾಲಕರು ಶಾಲಾ ವಿದ್ಯಾರ್ಥಿಗಳು ಶಿಕ್ಷಕ ವೃಂದದವರು ಶಾಲಾ ಮಕ್ಕಳ ಮೇಳವನ್ನು ನೋಡಿ ಸಂತಸಪಟ್ಟರು ಇಂತಹ ಮೇಳದಿಂದ ಸರ್ಕಾರಿ ಉನ್ನತ ಶಿಕ್ಷಣ ಮಟ್ಟವು ಉತ್ತಮ ಸ್ಥಾನವನ್ನು ಹೆಚ್ಚಾಗುವುದು ಇಂತಹ ಮೇಳಗಳು ಸರ್ಕಾರಿ ಎಲ್ಲಾ ಶಾಲೆಗಳಲ್ಲಿ ಆಯೋಜಿಸಿ ಉನ್ನತ ಮಟ್ಟಕ್ಕೆ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳು ತಲುಪುವರು ಈ ಸಂದರ್ಭದಲ್ಲಿ ಶಾಲಾ ಮುಖ್ಯ ಗುರುಗಳಾದ ಈಶ್ವರಯ್ಯ ಸರ್ ಶಾಲಾ ವಿದ್ಯಾರ್ಥಿಗಳ ಪಾಲಕರು ಶಿಕ್ಷಕ ವೃಂದದವರು ಉಪಸ್ಥಿತರಿದ್ದರು

## ಜೆಸ್ಕಾಂ ನಗರ-02: ಜನವರಿ 24ರಂದು ವಿದ್ಯುತ್ ವ್ಯತ್ಯಯ

**ರಾಯಚೂರು ಜ.23–** ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ವ್ಯಾಪ್ತಿಯ ವಡವಟ್ಟಿ 110 ಕೆವಿ ಉಪ ಕೇಂದ್ರದಲ್ಲಿ ವಿದ್ಯುತ್ ಮಾರ್ಗದ ದುರಸ್ತಿ ಹಾಗೂ ಸುಧಾರಣೆ ಕಾಮಗಾರಿಯನ್ನು ನಿರ್ವಹಿಸುವ ಪ್ರಯುಕ್ತ ಜನವರಿ 24ರ ಬೆಳಿಗ್ಗೆ 10.30ರಿಂದ ಸಂಜೆ 6.30ವರೆಗೆ ಗಾಜಗಾರಪೇಟೆ, ಫಾರೂಕ್ ಅನ್ವರ್ ಕಂಪನಿ, ಕೊಲ್ಮಿ, ಚೌಡಮ್ಮಕಟ್ಟೆ, ಗಾಜಗಾರಪೇಟೆ ಸೇರಿದಂತೆ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕಾರಿಸುವಂತೆ ಕೋರಲಾಗಿದೆ.ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ನಿರಂತರ ಸೇವಾ ಕೇಂದ್ರ: 08532-226386,08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ಸಹಾಯಕಕಾರ್ಯನಿರ್ವಾಹಕಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲೂಕ ಮಟ್ಟದ ವಿಕಲಚೇತನರ ಕುಂದು ಕೊರತೆಗಳ ಸಭೆ ನಡೆಸುವಂತೆ ಮನವಿ



ಯುವಮಾರ್ಗ ಸುದ್ದಿ

**ಮಾನ್ವಿ.ಜ.23–** ಪಟ್ಟಣದ ತಹಶೀಲ್ದಾರ್ ಕಚೇರಿಯಲ್ಲಿ ಕರ್ನಾಟಕ ರಾಜ್ಯ ವಿಕಲಚೇತನರ ಆರ್.ಪಿ.ಡಿ ಟಾಸ್ಕ್ ಪೋರ್ಸ್ ತಾಲೂಕು ಸಮಿತಿ ವತಿಯಿಂದ ತಹಶೀಲ್ದಾರ್ ರವರಿಗೆ ಉಪತಹಶೀಲ್ದಾರ್ ವಿನಾಯಕ ರಾವ್ ಮೂಲಕ ಮನವಿ ಸಲ್ಲಿಸಿ ಜಿಲ್ಲಾಧ್ಯಕ್ಷರಾದ ಎಂ.ಡಿ. ಜಾಫರ್ ಮಾತನಾಡಿ ತಾಲೂಕಿನಲ್ಲಿನ ವಿಕಲಚೇತನರು ಹಾಗೂ ಅವರ ಪೋಷಕರ ಸಮಸ್ಯೆಗಳು ಹಾಗೂ ವಿಕಲಚೇತನರ ಶೈಕ್ಷಣಿಕ, ಆರ್ಥಿಕ, ಆರೋಗ್ಯ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿಗೆ ಸಂಬಂಧಿಸಿದಂತೆ ಹಲವಾರು ಸಮಸ್ಯೆಗಳ ಪರಿಹಾರಕ್ಕಾಗಿ ಹಾಗೂ ಸರ್ಕಾರದ ಯೋಜನೆಗಳನ್ನು ಹಾಗೂ ಸೌಲಭ್ಯಗಳನ್ನು ವಿಕಲಚೇತನರು ಪಡೆಯುವುದಕ್ಕೆ ಸಾಧ್ಯವಾಗದೆ ಇರುವ ಕುರಿತು ವಿಕಲಚೇತನರ ಹಕ್ಕುಗಳು ಬಗ್ಗೆ ತಿಳಿದುಕೊಂಡು ಅವುಗಳ ಪರಿಹಾರಕ್ಕಾಗಿ ಶೀಘ್ರದಲ್ಲಿ ತಾಲೂಕ ಮಟ್ಟದ ವಿಕಲಚೇತನರ ಕುಂದು ಕೊರತೆಗಳ ಸಭೆಯನ್ನು ಹಮ್ಮಿಕೊಳ್ಳಬೇಕೆಂದು ಒತ್ತಾಯಿಸಿದರು

ತಾಲೂಕ ಅಧ್ಯಕ್ಷರಾದ ಹನುಮೇಶ್ ಕಾತರಕಿ, ತಾಲೂಕ ಪ್ರಧಾನ ಕಾರ್ಯದರ್ಶಿ ವೆಂಕಟೇಶ್, ಸದಸ್ಯರಾದ ಸತ್ತಪ್ಪಯ್ಯ ,ದೊಡ್ಡ ನರಸಪ್ಪ, ನರಸಪ್ಪ ಕಾತರಕಿ ,ವೀರೇಶ್ ಸೇರಿದಂತೆ ಇನ್ನಿತರರು ಇದ್ದರು.

## ಜಿಲ್ಲಾ ಮಾನವ ಅಭಿವೃದ್ಧಿ ವರದಿ ತಯಾರಿಕೆಜಿಲ್ಲೆಯ ಅಭಿವೃದ್ಧಿ ನಿರ್ಣಯಿಸುವ ಅಂಶ ಒಳಗೊಂಡಿರಲಿ:ಜಿಲ್ಲಾಧಿಕಾರಿ




**ಬಳ್ಳಾರಿ,ಜ.23–** ಜಿಲ್ಲಾ ಮಾನವ ಅಭಿವೃದ್ಧಿ-2025 ಮತ್ತು ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031 ರವರೆಗೆ ವರದಿ ತಯಾರಿಕೆ ಕುರಿತಂತೆ ಅಧಿಕಾರಿಗಳು ನೀಡುವ ವರದಿಯಲ್ಲಿನ ಅಂಶಗಳು ಜಿಲ್ಲೆಯ ಅಭಿವೃದ್ಧಿ ನಿರ್ಣಯಿಸುವ ಪೂರಕ ಅಂಶಗಳಾಗಿರಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾ ಮಾನವ ಅಭಿವೃದ್ಧಿ-2025 ಮತ್ತು ಸಮಗ್ರ ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031 ರವರೆಗೆ ವರದಿ ತಯಾರಿಕೆಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ವರದಿಗಳ ತಯಾರಿಕೆಗೆ ದತ್ತಾಂಶಗಳು, ಸೂಚಕಗಳು ಹಾಗೂ ಸೂಚ್ಯಾಂಕಗಳ ಕುರಿತು ಶುಕ್ರವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಒಂದು ದೇಶದ ಅಭಿವೃದ್ಧಿ ಎಂದರೆ ಮಾನವನ ಅಭಿವೃದ್ಧಿ ಅಳತೆಯ ಮೂಲಕ ಹೇಳಬಹುದಾಗಿದ್ದು, ಪ್ರತಿಯೊಂದು ರಾಷ್ಟ್ರಗಳು ಇಂತಹ ವರದಿಗಳನ್ನು ತಯಾರಿಸುತ್ತವೆ. ವಿಶ್ವದಲ್ಲಿಯೇ ಆರ್ಥಿಕತೆಯಲ್ಲಿ ಭಾರತ ದೇಶ 5ನೇ ಸ್ಥಾನದಲ್ಲಿದ್ದು, ಅಭಿವೃದ್ಧಿಯಲ್ಲಿದೆ. ಆದರೆ ಮಾನವ ಅಭಿವೃದ್ಧಿ ಸೂಚ್ಯಂಕದಲ್ಲಿ ಭಾರತ ದೇಶ 130 ನೇ ಸ್ಥಾನದಲ್ಲಿದೆ. ಇದಕ್ಕೆ ಕಾರಣ ಮಾನವ ಸಂಪನ್ಮೂಲ ಅಭಿವೃದ್ಧಿ ಹೊಂದುತ್ತಿಲ್ಲ ಎಂದು ವಿಷಾಧ ವ್ಯಕ್ತಪಡಿಸಿದರು.

ಜಿಲ್ಲಾ ಮಾನವ ಅಭಿವೃದ್ಧಿ ವರದಿಯು ಜಿಲ್ಲೆಯ ಜನರ ಕಲ್ಯಾಣ, ಶಿಕ್ಷಣ, ಆರೋಗ್ಯ ಮತ್ತು ಆದಾಯದಂತಹ ಅಂಶಗಳನ್ನು ಅಳೆಯುವ ಬಹಳ ಮುಖ್ಯವಾದ ವರದಿಯಾಗಿದ್ದು, ಎಲ್ಲಾ ಇಲಾಖೆ ಅಧಿಕಾರಿಗಳು ವರದಿ ತಯಾರಿಕೆ ಪ್ರಕ್ರಿಯೆಗೆ ಸಂಬಂಧಿಸಿದ ಮಾಹಿತಿಯನ್ನು ನೀಡುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಸಹಕರಿಸಬೇಕು. ನಿಖರವಾದ ಅಂಕಿ- ಅಂಶಗಳನ್ನು ನೀಡುವಿದರಿಂದ ಬಳ್ಳಾರಿಯು ಜಿಲ್ಲಾ ಮಾನವ ಅಭಿವೃದ್ಧಿಯಲ್ಲಿ ಮುಂದುವರಿಯಲಿದೆ ಎಂದು ಹೇಳಿದರು.

2014-15 ರ ಸುಚ್ಯಾಂಕದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಬಳ್ಳಾರಿ ಜಿಲ್ಲೆಯು 0.513 ಇತ್ತು. 2019-2020 ರಲ್ಲಿ 0.730 ಕಾಣಬಹುದಾಗಿದೆ. ಹಾಗಾಗಿ ಅಭಿವೃದ್ಧಿಗೆ ಪೂರಕವಾಗಿ ವರದಿಗಳನ್ನು ಸಿದ್ಧಪಡಿಸಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಳೆಯ ದತ್ತಾಂಶಗಳನ್ನು ನೀಡದೇ, ಇತ್ತೀಚಿನ ದತ್ತಾಂಶಗಳನ್ನು ಮಾತ್ರ ನೀಡಬೇಕು. ವರದಿ ಉತ್ತಮವಾಗಿ ರೂಪುಗೊಳ್ಳಲು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ನಿಖರ ಮಾಹಿತಿ ನೀಡುವುದು ಅಗತ್ಯವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಶಿಕ್ಷಣ, ಆರೋಗ್ಯ ಪೋಷಣಾ ಸ್ಥಿತಿ, ಜೀವನೋಪಾಯ, ಮೂಲಸೌಕರ್ಯ, ಸಾಮಾಜಿಕ ಒಳಗೊಳ್ಳುವಿಕೆ ಹಾಗೂ ಪರಿಸರದ ಸುಸ್ಥಿರತೆ ಸೇರಿದಂತೆ ವಿವಿಧ ಮಾನವ ಅಭಿವೃದ್ಧಿ ಸೂಚ್ಯಂಕಗಳ ಆಧಾರದ ಮೇಲೆ ಜಿಲ್ಲೆಯ ಸಮಗ್ರ ಅಭಿವೃದ್ಧಿಯನ್ನು ಸಾಧಿಸುವುದು ಈ ವರದಿಗಳ ಪ್ರಮುಖ ಗುರಿಯಾಗಿರುತ್ತದೆ. ಅಧಿಕಾರಿಗಳು ದತ್ತಾಂಶ ಸಂಗ್ರಹಣೆ, ವಿಶ್ಲೇಷಣೆ, ಇಲಾಖಾವಾರು ಸಹಕಾರ ಮತ್ತು ಕಾಲಮಿತಿಯೊಳಗೆ ಮಾಹಿತಿಯನ್ನು ಒದಗಿಸಬೇಕು. ಜಿಲ್ಲೆಯ ಸಮಗ್ರ ಹಾಗೂ ಸಮತೋಲನೆಯುತ ಅಭಿವೃದ್ಧಿಗಾಗಿ ಇಲಾಖೆಗಳ ನಡುವೆ ಪರಸ್ಪರ ಸಮನ್ವಯ ಅಗತ್ಯ ಎಂದು ಅವರು ಹೇಳಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದ ಜಂಟಿ ನಿರ್ದೇಶಕ(ನಿವೃತ್ತ) ಶ್ರೀನಿವಾಸ್ ರಾವ್ ಅವರು ಮಾತನಾಡಿ, ಜಿಲ್ಲಾ ಮಾನವ ಅಭಿವೃದ್ಧಿ ವರದಿಗೆ ಅತ್ಯಂತ ಮಹತ್ವವಾದ ಮೌಲ್ಯವಿದೆ. ಇದು ದೀರ್ಘ, ಆರೋಗ್ಯಕರ ಮತ್ತು ಸೃಜನಾತ್ಮಕ ಜೀವನ ನಡೆಸಲು, ಶಿಕ್ಷಣ ಪಡೆಯಲು ಮತ್ತು ಯೋಗ್ಯ ಜೀವನ ಮಟ್ಟಕ್ಕೆ ಬೇಕಾದ ಸಂಪನ್ಮೂಲಗಳನ್ನು ಹೊಂದಲು ಅವಕಾಶ ನೀಡುತ್ತದೆ. ಹಾಗಾಗಿ ಅಧಿಕಾರಿಗಳು ತಾವು ತಯಾರಿಸುವ ವರದಿಯಿಂದ ಜಿಲ್ಲೆಯ ಅಭಿವೃದ್ಧಿ ಅವಲಂಬಿತವಾಗಿರುತ್ತದೆ. ವಸ್ತುಸ್ಥಿತಿ ವರದಿ ತಯಾರಿಕೆಗೆ ಅಧಿಕಾರಿಗಳ ಸಹಕಾರ ಅಗತ್ಯವಾಗಿದೆ ಎಂದು ಹೇಳಿದರು.

ಇನ್ನೋರ್ವ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ನಿರಂಜನ್ ಅವರು ಮಾತನಾಡಿ, ಮಾನವ ಅಭಿವೃದ್ಧಿ ಸೂಚ್ಯಂಕ ತಯಾರಿಕೆಗೆ ಜನರ ಜೀವನ ಮಟ್ಟ, ಶಿಕ್ಷಣ, ಆರೋಗ್ಯ, ಆದಾಯ ಸೇರಿದಂತೆ ಇತರೆ ಅಂಕಿ ಅಂಶಗಳನ್ನು ಪರಿಗಣಿಸಲಾಗುತ್ತದೆ. ನಿಖರವಾದ ಮಾಹಿತಿ ಮತ್ತು ಅಂಕಿ ಅಂಶಗಳನ್ನು ನೀಡಿದರೆ ಉತ್ತಮ ವರದಿಯಾಗುತ್ತದೆ ಎಂದು ಅವರು ಹೇಳಿದರು.

ಇದೇ ವೇಳೆ ರಾಷ್ಟ್ರೀಯ ಮತದಾರರ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಜಿಪಂ ಉಪಕಾರ್ಯದರ್ಶಿ ಶಶಿಕಾಂತ ಶಿವಪೂರೆ, ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಜಿಪಂ ಯೋಜನಾಧಿಕಾರಿ ಪ್ರಮೋದ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ತಾಲೂಕು ಕುರುಬರ ಸಂಘದ ವತಿಯಿಂದ ಲಿಂ. ಶ್ರೀ ಸಿದ್ದರಾಮಾನಂದಸ್ವಾಮೀಜಿಗಳಿಗೆ ನುಡಿ ನಮನ



ಯುವಮಾರ್ಗ ಸುದ್ದಿ

**ಮಾನ್ವಿ,ಜ.23–** ಪಟ್ಟಣದ ವಿಶ್ವಜ್ಯೋತಿ ಕನಕದಾಸ ವಸತಿ ನಿಲಯದ ಸಭಾಂಗಣದಲ್ಲಿ ತಾಲೂಕು ಕುರುಬರ ಸಂಘದ ವತಿಯಿಂದ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶಾಖಮಠ ತಿಂತಿಣಿ ಬ್ರಿಜ್ ಲಿಂ. ಶ್ರೀ ಸಿದ್ದರಾಮಾನಂದ ಸ್ವಾಮೀಜಿಗಳಿಗೆ ನುಡಿನಮನ ಸಲ್ಲಿಸಿ ತಾ.ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಕೆ.ಅಂಬರೇಶಪ್ಪ ವಕೀಲರು ಮಾತನಾಡಿ ಲಿಂ. ಶ್ರೀ ಸಿದ್ದರಾಮಾನಂದ ಸ್ವಾಮೀಜಿಗಳು ತಿಂತಿಣಿ ಬ್ರಿಜ್ ಹತ್ತಿರ ಕಾಗಿನೆಲೆ ಮಹಾಸಂಸ್ಥಾನ ಕನಕ ಗುರುಪೀಠದ ಶಾಖಮಠವನ್ನು ಕಟ್ಟಿ ನಿರಂತರವಾಗಿ ಹಾಲುಮತ ವೈಭವ ಕಾರ್ಯಕ್ರಮವನ್ನು ಎಲ್ಲಾ ಜಾತಿ ಧರ್ಮದವರನ್ನು ಒಳಗೊಂಡಂತೆ ಅಯೋಜಿಸುವ ಮೂಲಕ ನಮ್ಮ ಕುರುಬ ಸಮಾಜವನ್ನು ರಾಜ್ಯದಲ್ಲಿ ಗುರುತಿಸುವಂತೆ ಮಾಡಿದರು. ಶ್ರೀಗಳು ಕೇವಲ ಹಾಲುಮತ ಸಮುದಾಯಕ್ಕೆ ಮಾತ್ರ ಸಿಮೀತರಾಗದ ಸಮಾಜದ ಎಲ್ಲಾ ವರ್ಗದ ಜನರಿಗೆ ಅಚ್ಚುಮೆಚ್ಚಿನ ಗುರುಗಳಾಗಿದ್ದರು ಅವರು ಮಾನ್ವಿ ತಾಲೂಕಿನ ಎಲ್ಲಾ ಗ್ರಾಮಗಳಲ್ಲಿ ಸಂಚಾರಿಸಿ ಪ್ರವಚನವನ್ನು ನೀಡುವ ಮೂಲಕ ಎಲ್ಲಾ ಸಮುದಾಯದವರು ಸನ್ಮಾರ್ಗದಲ್ಲಿ ನಡೆಯುವಂತೆ ಮಾರ್ಗದರ್ಶನವನ್ನು ನೀಡಿರುವುದನ್ನು ಸ್ಮರಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ತಾ.ಅಧ್ಯಕ್ಷ ಸತ್ಯನಾರಾಯಣ ವಕೀಲರು ಮುಷ್ಟೂರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಬೀರಪ್ಪಪೂಜಾರಿ ಹಳ್ಳಿಹೊಸುರ್, ಬೀರಪ್ಪಪೂಜಾರಿ ಮುಷ್ಟೂರು, ಬಿ.ಕೆ.ಅಮರೇಶಪ್ಪ, ಕೆ.ಬಸವಂತಪ್ಪ, ಡಾ,ಯಂಕನಗೌಡ ಪಾಟೀಲ್ ಬೊಮ್ಮನಾಳ,ಡಿ.ವೆಂಕಟೇಶಪ್ಪ, ಬಸವರರಾಜ ಭೋಗವತಿ, ಈರಣ್ಣ ಮಾರ್ಲಟ್ಟಿ, ಬಸವರಾಜ ಕನ್ನಾರಿ, ರಾಹುಲ್ ಕಲಂಗೇರಾ, ಶಿವಶಂಕರ್ ಗೌಡ ಬಾಗಲವಾಡ್, ಅಜಯಕುಮಾರ್,ದುರುಗಪ್ಪ ತಡಕಲ್ ,ವಿಜಯಕುಮಾರ್ ಸಾಹುಕಾರ್ ಉದ್ಬಳ,ವೆಂಕನಗೌಡ ನಿವೃತ್ತ ಎ.ಎಸ್.ಐ. ಬೊಮ್ಮನಾಳ,ಬಸವರಾಜ್, ಹನುಮಂತ ಗೌಡ ಬೊಮ್ಮನಾಳ,ಭೀಮನಗೌಡ ಮುಷ್ಟೂರು,ಮಹಾಂತೇಶ ಒಲೇಕರ್,ಮಹದೇವಪ್ಪ ಹಳ್ಳಿಹೊಸೂರ,ಅಯ್ಯಪ್ಪ ಮೇಟಿ ಉದ್ಬಳ,ದೇವೇಗೌಡ ಉದ್ಬಳ,ಹನುಮಂತ.ಡಿ.ಗುರಿಕಾರ, ಪವನಕುಮಾರ್ ಪೂಜಾರಿ ಹರವಿ ಸೇರಿದಂತೆ ಕುರುಬ ಸಮಾಜದ ಮುಖಂಡರು ಭಾಗವಹಿಸಿದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

ಯುವ ಮಾರ್ಗ
www.yuvamarga.com Yuva Marga yuva_marga_

# ಜಯನಗರದಲ್ಲಿ ಜ.25 ರಂದು ಶೋಭಾಯಾತ್ರೆ ಅದ್ದೂರಿ ಹಿಂದೂ ಸಮ್ಮೇಳನ

**ಕಲಬುರಗಿ:ಜ.23–** ಹಿಂದೂ ಸಮಾಜವು ಕೇವಲ ಧರ್ಮವಲ್ಲದೆ ಸಮಾಜದ ಏಕತೆ, ಸಂಸ್ಕೃತ ಉಳಿವು ಮತ್ತು ಎಲ್ಲರಲ್ಲೂ ವಿಶಾಲ ಮನೋಭಾವ ಮೂಡಿಸುವ ಧರ್ಮವಾಗಿದೆ. ಅಲ್ಲದೆ ಭಾರತದ ಅಖಂಡತೆ ಕಾಪಾಡುವ ಆಶಾ ಭಾವನೆಯೂ ಹೊಂದಿದೆ.ಇದೇ ನಿಟ್ಟಿನಲ್ಲಿ ಹಿಂದೂ ಧರ್ಮದ ಜಾಗೃತಿ ಮೂಡಿಸುವ ಉದ್ದೇಶದಿಂದ ಇದೇ ತಿಂಗಳ 25 ಭಾನುವಾರರಂದು ಅದ್ದೂರಿಯಾಗಿ ಹಿಂದೂ ಸಮ್ಮೇಳನ ಹಮ್ಮಿಕೊಳ್ಳಲಾಗಿದೆ ಎಂದು ಓಂ ಉಪನಗರ ಶಾಖೆ ಹಿಂದೂ ಸಮ್ಮೇಳನ ಆಯೋಜನೆ ಸಮಿತಿ ಅಧ್ಯಕ್ಷ ಡಾ.ಲಿಂಗರಾಜ ಸಿರಗಾಪೂರ ತಿಳಿಸಿದರು.

ಪತ್ರಿಕಾ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಈಗಾಗಲೇ ಸಮ್ಮೇಳನಕ್ಕೆ ಸಂಪೂರ್ಣ ತಯ್ಯಾರಿ ಮಾಡಲಾಗಿದೆ.ಅಂದು ಬೆಳಿಗ್ಗೆ 11 ಗಂಟೆಗೆ ವಿರೇಂದ್ರ ಪಾಟೀಲ ಬಡಾವಣೆಯ ಹನುಮಂತನ ಗುಡಿಯಿಂದ ಸಮ್ಮೇಳನದ ಶೋಭಾಂಯಾತ್ರೆಯು ಭವ್ಯ ಮೆರವಣಿಗೆ ಪ್ರಾರಂಭ ವಾಗುವುದು.ಮೆರವಣಿಗೆಯಲ್ಲಿ ಎತ್ತಿನ ಗಾಡಿಗಳು ,ವಿವಿಧ ಸಾಂಸ್ಕೃತಿಕ ಕಲಾ ತಂಡಗಳು, ಡೊಳ್ಳು ಕುಣಿತ ಹಾಗೂ ವಾದ್ಯಗಳ



ಮೂಲಕ ಎತ್ತಿನ ಗಾಡಿಗಳಲ್ಲಿ ಭಾರತ ಮಾತೆಯ ಭಾವಚಿತ್ರ ಮತ್ತು ವಿವಿಧ ಮಹಾ ಪುರುಷರ ಭಾವಚಿತ್ರಗಳ ಕಟೌಟಗಳನ್ನು ಪ್ರದರ್ಶಿಸಲಾಗುವುದು.ಈ ಮೆರವಣಿಗೆಯಲ್ಲಿ ಮಠಾಧೀಶರು, ಗಣ್ಯರು, ಸಾರ್ವಜನಿಕರು, ಮಹಿಳೆಯರು ಸೇರಿದಂತೆ ಹಲವರು ಪಾಲ್ಗೋಳ್ಳಲಿದ್ದಾರೆ.ನಂತರ ಮೆರವಣಿಗೆ ಸಮ್ಮೇಳನ ನಡೆಯುವ ಜಯನಗರ ಶಿವಮಂದಿರದ ಆವರಣದಲ್ಲಿ ಸಮಾಪ್ತಿಗೊಳ್ಳುವುದು ಎಂದು ತಿಳಿಸಿದರು

ನಂತರ ಮಧ್ಯಾಹ್ನ 1 ಗಂಟೆಗೆ ನಡೆಯುವ ಸಮ್ಮೇಳನ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ ವಹಿಸಲು ಪಾಳಾ ಗ್ರಾಮದ ಸಂಸ್ಥಾನ ಮಠದ ಪರಮ ಪೂಜ್ಯ ಡಾ.ಷ.ಬ್ರ.ಗುರುಮೂರ್ತಿ ಶಿವಾಚಾರ್ಯರು , ಶ್ರೀನಿವಾಸ ಸರಡಗಿಯ ಮಹಾಲಕ್ಷ್ಮೀ ಶಕ್ತಿ ಪೀಠದ ಪೀಠಾಧಿಪತಿ ಪೂಜ್ಯ ಶ್ರೀ ಡಾ.ಅಪ್ಪಾರಾವ ದೇವಿ ಮುತ್ಯಾ,ಹೊನ್ನಕಿರಣಗಿಯ ಸಂಸ್ಥಾನ ಮಠದ ಪರಮ ಪೂಜ್ಯ ಶ್ರೀ.ಷ.ಬ್ರ.ಕೆಂಚ ಬಸವೇಶ್ವರ ಶಿವಾಚಾರ್ಯರು,ಕೂಸನೂರಿನ ಮಹಾಲಿಂಗೇಶ್ವರ ದೇವಸ್ಥಾನ ಗುರುಪೀಠದ ಪರಮ ಪೂಜ್ಯ ಶ್ರೀ ಷ.ಬ್ರ.ಪೀರಪ್ಪ ಮುತ್ಯಾ, ಹಾಗೂ ಕುಸನೂರು ತಾಂಡಾ ಸೇವಾಲಲ ಜೈ ಭವಾನಿ ಗುರುಪೀಠದ ಪರಮ ಪೂಜ್ಯ ಶ್ರೀ ವಿಠ್ಠಲ ಲಕ್ಷ್ಮಣ ರಾಠೋಡ ಅವರುಗಳು ಆಗಮಿಸುವರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿಂದೂ ಸಮ್ಮೇಳನ ಆಯೋಜನಾ ಸಮಿತಿಯ ಅಧ್ಯಕ್ಷ ಡಾ.ಲಿಂಗರಾಜ ಸಿರಗಾಪೂರ ವಹಿಸುವರು.ಸಮ್ಮೆಳನದ ಕಾರ್ಯಕ್ರಮಕ್ಕೆ ಬ್ರಹತ್ ವೇದಿಕೆ ಹಾಕಲಾಗುತ್ತಿದೆ.ಕಾರ್ಯಕ್ರಮದ ನಂತರ ಸಾರ್ವಜನಿಕರಿಗೆ ಊಟದ ವ್ಯವಸ್ಥೆ ಮಾಡಲಾಗುವುದು.ಈ ಸಮ್ಮೇಳನದಲ್ಲಿ ಓಂ ನಗರ ಶಾಖೆಯ 25 ಕ್ಕೂ ಹೆಚ್ಚು ಬಡಾವಣೆಗಳ ಸುಮಾರು 4 ಸಾವಿರ ಜನರು ಸೇರುವ ನೀರೀಕ್ಷೆ ಇದೆ ಎಂದು ಅವರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಸಮಿತಿ ಉಪಾಧ್ಯಕ್ಷ ಸೂರ್ಯಕಾಂತ ಕೆ.ಬಿ, ನೇಮಿನಾಥ ಜೈನ್,ಬಸವರಾಜ ನಾಯ್ಕುರ,ಹರೀಶ ದೊಡ್ಡಮನಿ,ಕಾಶಿನಾಥ ರಾಯಗೊಂಡ, ಸದಸ್ಯರಾದ ಮನೋಹರ ಬಡಶೇಷಿ,ಜೆ.ನಾಗರಾಜ,ರಾಜಕುಮಾರ ಮಾಗ,ಶರಣು ಸಿಗಿ,ಇದ್ದರು.

# ರಾಜ್ಯದಲ್ಲಿ ಮದ್ಯ ನಿಷೇಧ ಆಗ್ರಹಿಸಿ, ಹಳ್ಳಿಗಳಲ್ಲಿ ಅಕ್ರಮ ಮದ್ಯ ಮಾರಾಟ ವಿರೋಧಿಸಿ, ಅರಿವಿನ ಕ್ರಾಂತಿ_ಜನಜಾಗೃತಿ



**ಬಳ್ಳಾರಿ, ಜ.23:** ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಗ್ಗಿಲ್ಲದೆ ಹಳ್ಳಿ ಹಳ್ಳಿಗಳಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟದ ವಿರುದ್ಧ ಜನರಿಗೆ ಜಾಗೃತಿ ಮೂಡಿಸಿ ಮದ್ಯ ಮುಕ್ತ ಕಲ್ಯಾಣ ಕರ್ನಾಟಕದ ನಿರ್ಮಾಣಕ್ಕೆ ಕೆ ಆರ್ ಎಸ್ ಪಕ್ಷದ ವತಿಯಿಂದ ಇಂದು ಬಳ್ಳಾರಿ ಜಿಲ್ಲಾ, ಕಂಪ್ಲಿ ತಾಲ್ಲೂಕಿನ ಇಟಗಿ ಗ್ರಾಮದಲ್ಲಿ ಅರಿವಿನ ಕ್ರಾಂತಿ (ಕುಡಿತ ಬಿಡಿಸಿ ಸಂಸಾರ ಉಳಿಸಿ) ಕಾರ್ಯಕ್ರಮ ನಡೆಯಿತು.

ಬೆಳಿಗ್ಗೆ ಕಂಪ್ಲಿ ಬಸ್ ನಿಲ್ದಾಣದಿಂದ ಪಕ್ಷದ ನೂರಾರು ಸೈನಿಕರ ನೇತೃತ್ವದಲ್ಲಿ ಆರಂಭವಾದ ಜಾಥಾವು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸರಾಯಿ ಬೇಡ,ಶಿಕ್ಷಣ ಬೇಕು.ನಮಗೆ ಬೀರು ಬೇಡ,ನೀರು ಬೇಕು. ಎಂಬ ಘೋಷಣೆ ಕೂಗುತ್ತಾ ಅಕ್ರಮವಾಗಿ ಮದ್ಯ ಮಾರುವ ಅಂಗಡಿಗಳಿಗೆ ಭೇಟಿ ಮಾಡಿ ಅಕ್ರಮ ಮದ್ಯ ಮಾರುವುದನ್ನು ನಿಲ್ಲಿಸುವಂತೆ ಅಂಗಡಿ ಮಾಲೀಕರಿಗೆ ಮನವಿ ಮಾಡಲಾಯಿತು.

ಸಭಾ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೆ ಆರ್ ಎಸ್ ಪಕ್ಷದ ಗೌರವಾಧ್ಯಕ್ಷರಾದ ಶ್ರೀ ರವಿ ಕೃಷ್ಣಾರೆಡ್ಡಿ ಅವರು ರಾಜ್ಯದಲ್ಲಿ ನಮ್ಮನ್ನು ಆಳುವ ಯಾವುದೇ ಸರ್ಕಾರಗಳು ಜಾರಿ ಮಾಡುತ್ತಿರುವ ಯಾವುದೇ ಜನ ಕಲ್ಯಾಣದ ಯೋಜನೆಗಳು ವಿಶೇಷವಾಗಿ ಬಡತನ ನಿರ್ವಣೆಯಂತಹ ವಿಶೇಷ ಯೋಜನೆಗಳು ಗಣನೀಯವಾಗಿ ಫಲ ನೀಡದೇ ಇರುವ ಕಾರಣ ಕಲ್ಯಾಣ ಕರ್ನಾಟಕದ ಹಳ್ಳಿ ಹಳ್ಳಿಗಳಲ್ಲಿ ಮದ್ಯ ಮಾರಾಟ ನಡೆಯುತ್ತಿದ್ದು ಇದರಿಂದಾಗಿ ಮಹಿಳೆಯರು,ಯುವಕರು,ಬಡವರು, ಹಿಂದುಳಿದವರು,ಸಾಮಾನ್ಯ ಜನರು ಬಲಿಯಾಗುತ್ತಿದ್ದಾರೆ. ಹಾಗಾಗಿ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ವತಿಯಿಂದ ಕಲ್ಯಾಣ ಕರ್ನಾಟಕದ ಭಾಗದ ಹಲವು ಜಿಲ್ಲೆಗಳಲ್ಲಿ ಈ ಜಾಥಾವು ಆಯೋಜಿಸಲಲಾಗಿದೆ. ಅಕ್ರಮ ಮದ್ಯ ಮಾರಾಟವನ್ನು ಸ್ಥಳೀಯ ಸಂಸ್ಥೆಗಳ ಮತ್ತು ಇಲಾಖೆಗಳ ಅಧಿಕಾರಿಗಳ(ಗ್ರಾಮ ಪಂಚಾಯತಿ ಅಭಿವೃದಿ ಅಧಿಕಾರಿಗಳು,ಪೊಲೀಸ್ ಇಲಾಖೆ,ಅಭಕಾರಿ ಇಲಾಖೆ)ವಿಶೇಷ ಕಾರ್ಯವು ಪ್ರಮುಖವಾಗಿದ್ದು ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ ತಡೆಯುವಲ್ಲಿ ನಿರ್ಭೀತಿಯಿಂದ ಕೆಲಸ ಮಾಡಬೇಕೆಂದು ತಿಳಿಸಿ ಅಕ್ರಮದ ಮದ್ಯ ಮಾರಾಟ ಕರ್ನಾಟಕದಲ್ಲಿ ಸಂಪೂರ್ಣ ನಿಷೇಧಿಸುವಂತೆ ಒತ್ತಾಯಿಸಿ ಅಭಕಾರಿ ಇಲಾಖೆಯ ಮುಖ್ಯಸ್ಥರ ಮೂಲಕ ರಾಜ್ಯ ಸರಕಾರಕ್ಕೆ ಮನವಿ ಮಾಡಲಾಯಿತು. ಮಹಿಳಾ ಘಟಕದ ರಾಜ್ಯಾಧ್ಯಕ್ಷರಾದ ಶ್ರೀಮತಿ ಆಶಾ ವೀರೇಶ್ ಮಾತನಾಡಿ ಅಧಿಕಾರಿಗಳ ಕರ್ತವ್ಯ ನಿರ್ಲಕ್ಷ್ಯದಿಂದಾಗಿ ಹಾಗೂ ಜನಪ್ರತಿನಿಧಿಗಳ ಸರ್ಕಾರದ ಕಾನೂನು ನಿಯಮಗಳ ಉಲ್ಲಂಘನೆ ಯಿಂದಾಗಿ ಹಳ್ಳಿ ಹಳ್ಳಿಗಳಲ್ಲಿ, ಅಂಗಡಿಯ ಮುಂಗಟ್ಟುಗಳಲ್ಲಿ, ಹಾದಿ ಬೀದಿಗಳಲ್ಲಿ, ಅಕ್ರಮವಾಗಿ ಸರಾಯಿ ಸಿಗುವಂತಾಗಿದ್ದು ಇದರಿಂದ ಸಾರ್ವಜನಿಕರು ಮದ್ಯ ವ್ಯಸನಿಗಳಾಗುತ್ತಿದ್ದು ಇದರಿಂ ದ ಸಾಮಾಜಿಕ,ಆರ್ಥಿಕ,ಕೌಟಂಬಿಕ ಸಮಸ್ಯೆಗಳಿಂದ ಖಿನ್ನತೆಗೆ ಒಳಗಾಗಿ ಜೀವನವನ್ನೇ ಹಾಳುಮಾಡಿಕೊಳ್ಳುತ್ತಿರುವ ಪ್ರಸಂಗಗಳು ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಮಾಧ್ಯಮಗಳಲ್ಲಿ ಕಾಣಬಹುದಾಗಿದೆ.ಕೆ ಆರ್ ಎಸ್ ಪಕ್ಷವು ಮಹಿಳಾ ಘಟಕದ ನೇತೃತ್ವದಲ್ಲಿ ರಾಜ್ಯದಲ್ಲಿ ಜೆಸಿಬಿ ಪಕ್ಷಗಳು ಮಾಡದೇ ಇರುವ ವಿಶೇಷವಾದ ಕಾರ್ಯಕ್ರಮಗಳನ್ನು ಮತ್ತು ಅಭಿಯಾನಗಳನ್ನು ಹಮ್ಮಿಕೊಳ್ಳುವ ಮೂಲಕ ಜನರ ಜಾಗೃತಿ ಮಾಡಿ ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ಮದ್ಯ ಮುಕ್ತ ಕರ್ನಾಟಕದ ನಿರ್ಮಾಣದ ಕಾರ್ಯಕ್ಕೆ ಮುಂದಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮದ್ಯಪಾನ ನಿಷೇಧ ಆಂದೋಲನದ ಮುಖ್ಯಸ್ಥೆ, ರಾಜ್ಯ ಕಾರ್ಯಾಧ್ಯಕ್ಷ ರಘು ಜಾಣಗೆರೆ, ರಾಜ್ಯ ಕಾರ್ಯದರ್ಶಿಗಳಾದ ರಮೇಶ್ ಗೌಡ ಮಹಿಳಾ ಘಟಕದ ಉಪಾಧ್ಯಕ್ಷೆ ಶಕುಂತಲಾ, ರಾಜ್ಯ ಸಂಘಟನಾ ಕಾರ್ಯದರ್ಶಿ ದೀಪಾ ಮನೂರ್, ಪುಷ್ಪ ನಿರುಪಾದಿ ಕೆ ಗೋಮರ್ಸಿ,ಮೇರಿ, ರೇಖಾ, ತರಂಗಿಣಿ ಸೇರಿದಂತೆ ನೂರಾರು ಜನ ಭಾಗವಹಿಸಿದ್ದರು.

# ದೆಹಲಿ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಯ್ಕೆ



**ಬಳ್ಳಾರಿ, ಜ.23–** 77ನೇ ಗಣರಾಜ್ಯೋತ್ಸವದ ದಿಲ್ಲಿ ಕಾರ್ಯಕ್ರಮಕ್ಕೆ ಆಯ್ಕೆಯಾದ ಎಚ್ ವೀರಾಪುರ ಗ್ರಾಮದ ಮೌಲಾಬಿ ಗಂಡ ಸಲೀಂ ಕುಟುಂಬದ ಸದಸ್ಯರನ್ನು ಜ್ಞಾನಜೋತಿ ಜಡೇಶ ಶಿವಲಿಂಗ ಮಂದಿರದ ವತಿಯಿಂದ ಅಭಿನಂದಿಸಲಾಯಿತು

ಈ ವೇಳೆ ಜಡೇಶ ತಾತನವರು ಮಾತನಾಡಿ ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ರೊಟ್ಟಿ ಸುಡುವ ಕಾಯಕರ ಮುಖಾಂತರ ಸ್ವಾವಲಂಬಿ ಬದುಕನ್ನು ರೂಪಿಸಿಕೊಂಡಿರುವ ಮೌಲಾಬಿಯವರನ್ನು ಗಣರಾಜ್ಯೋತ್ಸವಕ್ಕೆ ಆಹ್ವಾನ ನೀಡಿರುವುದು ನಮ್ಮ ಗ್ರಾಮಕ್ಕೆ ಸಂತೋಷದ ವಿಚಾರ ಎಲ್ಲಾ ಮಹಿಳೆಯರು ಕೂಡ ಈ ರೀತಿಯ ಸ್ವಾವಲಂಬಿ ಬದುಕನ್ನು ರೂಪಿಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದರು. ನಂತರ ಶಿಕ್ಷಕ ಎಸ್ ರಾಮಪ್ಪ ಮಾತನಾಡಿ ಎನ್ ಆರ್ ಎಲ್ ಎಂ ಒಕ್ಕೂಟ ವ್ಯವಸ್ಥೆಯಿಂದ ದೊರೆಯುವ ಸಾಲ ಸೌಲಭ್ಯವನ್ನು ಸಮರ್ಪಕ ವಾಗಿ ಬಳಕೆ ಮಾಡಿಕೊಂಡು ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿರುವುದು ನಿಜವಾಗು ಹೆಮ್ಮೆಯ ಸಂಗತಿ ಈ ಮೂಲಕ ಇದು ಪ್ರತಿಯೊಬ್ಬ ಮಹಿಳೆಯರಿಗೂ ಸ್ಪೂರ್ತಿ ಎಂದರು

ಈ ಸಂದರ್ಭದಲ್ಲಿ ಪ್ರಮುಖರಾದ ಶಿವನಗೌಡ ಪಾಟೀಲ್ ಈಶ್ವರ್ ಗೌಡ ಬಿಬಿಮ್ಮ ಶಿವನೇಗೌಡರ ರಾಮು ಸುರೇಶ್ ಸೇರಿದಂತೆ ಶಿವಮಾಲಾಧಾರಿಗಳು ಶ್ರೀಮಠದ ಸದ್ಭಕ್ತರು ಇದ್ದರು

# 18 ಬೈಕ್ ಕಳ್ಳತನ ಮಾಡಿದ ಕಳ್ಳನ ಬಂಧನ



**ಕಲಬುರಗಿ,ಜ.23–**ಬೈಕ್ ಕಳ್ಳನೊಬ್ಬನನ್ನು ಬಂಧಿಸಿ 7 ಲಕ್ಷ 35 ಸಾವಿರ ರೂಪಾಯಿ ಬೆಲೆಯ 18 ಮೋಟರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ಎಸ್‌ಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಫಜಲಪುರ ತಾಲ್ಲೂಕಿನ ಬಡದಾಳ ತಾಂಡಾದ ಸಂಜಯ್ ತಂದೆ ಖೇಮು ಚವ್ಹಾಣ್ (46) ಎಂಬಾತನನ್ನು ಬಂಧಿಸಿ 7.35 ಲಕ್ಷ ರೂಪಾಯಿ ಮೌಲ್ಯದ 18 ಬೈಕ್ ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಆರೋಪಿಯನ್ನು ವಿಚಾರಣೆಗೆ ಒಳಪಡಿಸಿದಾಗ ಈತ ರೇವೂರ್ ಪೊಲೀಸ್ ಠಾಣೆ ವ್ಯಾಪ್ತಿಯ ಅತನೂರ, ಕಲಬುರಗಿ ಜಿಲ್ಲೆಯ ಅಫಜಲಪುರ, ಕಲಬುರಗಿ ನಗರ, ವಿಜಯಪುರ ಜಿಲ್ಲೆಯ ಇಂಡಿ, ಸಾಲೋಟಗಿ, ಬೆಂಗಳೂರು ನಗರ ಹಾಗೂ ಮಹಾರಾಷ್ಟ್ರದ ಗಡಿಭಾಗದ ದುಧನಿ, ಅಕ್ಕಲಕೋಟ ಮತ್ತು ಇತರೆ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 18 ಬೈಕ್‌ಗಳನ್ನು ಕಳ್ಳತನ ಮಾಡಿದ್ದು, ತಾನು ಕಳ್ಳತನ ಮಾಡಿದ 18 ಮೋಟರ್ ಸೈಕಲ್‌ಗಳಲ್ಲಿ ಒಂದನ್ನು ತಾನು ಬಳಸಿಕೊಂಡಿದ್ದು, ಉಳಿದ 17 ಮೋಟರ್ ಸೈಕಲ್‌ಗಳಲ್ಲಿ ಕಮೀಷನ್ ಮೇಲೆ ಮಾರಾಟ ಮಾಡಲು ತನ್ನ ಪರಿಚಯದ ಮಲ್ಲಾಬಾದ ಗ್ರಾಮದ ಪರಶುರಾಮ ಅಲಿಯಾಸ್ ಸುನೀಲ ತಂದೆ ವಿಠಲ ಜಮಾದಾರ ಈತನಿಗೆ 4 ಮೋಟರ್ ಸೈಕಲ್‌ಗಳನ್ನು ಕೊಟ್ಟಿದ್ದು ಇನ್ನುಳಿದ 13 ಮೋಟರ್ ಸೈಕಲ್‌ಗಳನ್ನು ತಾನು ಮಾರಾಟ ಮಾಡುವ ಸಲುವಾಗಿ ತನ್ನ ಬಳಿಯಲ್ಲಿ ಇಟ್ಟುಕೊಂಡಿರುವುದಾಗಿ ಹೇಳಿದ್ದರಿಂದ ಆರೋಪಿತನು ಕಳವು ಮಾಡಿ ಮುಚ್ಚಿಟ್ಟಿದ್ದ ಎರಡು ರಾಯಲ್ ಎನಫೀಲ್ಡ್ ಬುಲೆಟ್ ಮೋಟರ್ ಸೈಕಲ್‌ಗಳು ಸೇರಿ ಅ.ಕಿ: 7 ಲಕ್ಷ 35 ಸಾವಿರ ರೂಪಾಯಿ ಬೆಲೆಯ ಎಲ್ಲ 18 ಮೋಟರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಸಹ ಆರೋಪಿತನಾದ ಮಲ್ಲಾಬಾದ ಗ್ರಾಮದ ಪರಶುರಾಮ ಅಲಿಯಾಸ್ ಸುನೀಲ ತಂದೆ ವಿಠಲ ಜಮಾದಾರ ಎಂಬಾತ ತಲೆ ಮರೆಸಿಕೊಂಡಿದ್ದು, ಆತನಿಗಾಗಿ ಶೋಧ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಅತನೂರ ಗ್ರಾಮದ ಭೀಮರಾಯ ಜಮಾದಾರ ಎಂಬುವವರು ಗ್ರಾಮದ ನಂದಿ ಬಸವೇಶ್ವರ ದೇವಸ್ಥಾನ ಪಕ್ಕದಲ್ಲಿ ನಿಲ್ಲಿಸಿದ ತಮ್ಮ ಬೈಕ್ ಕಳವಾದ ಬಗ್ಗೆ ರೇವೂರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು. ಈ ದೂರಿನ ಅನ್ವಯ ಬೈಕ್ ಕಳ್ಳನ ಪತ್ತೆಗೆ ಆಳಂದ ಡಿಎಸ್‌ಪಿ ತಮ್ಮರಾಯ ಪಾಟೀಲ, ಅಫಜಲಪುರ ಸಿಪಿಐ ಚನ್ನಯ್ಯ ಹಿರೇಮಠ ನೇತೃತ್ವದಲ್ಲಿ ರೇವೂರ ಪೊಲೀಸ್ ಠಾಣೆ ಪಿಎಸ್‌ಐಗಳಾದ ವಾತ್ಸಲ್ಯ, ಅಫಜಲಪುರ ಪೊಲೀಸ್ ಠಾಣೆ ಪಿಎಸ್‌ಐ ಸೋಮಲಿಂಗ ಒಡೆಯರ್, ಎಎಸ್‌ಐಗಳಾದ ಮಲ್ಲಣ್ಣ, ರಾಜಶೇಖರ, ಸಿಬ್ಬಂದಿಗಳಾದ ಶ್ರೀಕಾಂತ, ಸಂತೋಷ, ಶಿವಶರಣ, ವಿವೇಕಾನಂದ, ರಾಹುಲ ಮತ್ತು ಉಮೇಶ ಅವರನ್ನು ಒಳಗೊಂಡ ವಿಶೇಷ ಪತ್ತೆ ದಳ ರಚನೆ ಮಾಡಲಾಗಿತ್ತು. ಈ ತಂಡ ತನಿಖೆ ನಡೆಸಿ ಬೈಕ್ ಕಳ್ಳನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ವಿವರಿಸಿದರು.

ಬೈಕ್ ಕಳ್ಳನನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕಾರ್ಯವನ್ನು ಅವರು ಶ್ಲಾಘಿಸಿದರು.

# ದೆಹಲಿ ಗಣರಾಜ್ಯೋತ್ಸವ ಕಾರ್ಯಕ್ರಮಕ್ಕೆ ಆಯ್ಕೆ

**ಬಳ್ಳಾರಿ, ಜ.23–** 77ನೇ ಗಣರಾಜ್ಯೋತ್ಸವದ ದಿಲ್ಲಿ ಕಾರ್ಯಕ್ರಮಕ್ಕೆ ಆಯ್ಕೆಯಾದ ಎಚ್ ವೀರಾಪುರ ಗ್ರಾಮದ ಮೌಲಾಬಿ ಗಂಡ ಸಲೀಂ ಕುಟುಂಬದ ಸದಸ್ಯರನ್ನು ಜ್ಞಾನಜೋತಿ ಜಡೇಶ ಶಿವಲಿಂಗ ಮಂದಿರದ ವತಿಯಿಂದ ಅಭಿನಂದಿಸಲಾಯಿತು

ಈ ವೇಳೆ ಜಡೇಶ ತಾತನವರು ಮಾತನಾಡಿ ಸರ್ಕಾರದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ರೊಟ್ಟಿ ಸುಡುವ ಕಾಯಕರ ಮುಖಾಂತರ ಸ್ವಾವಲಂಬಿ ಬದುಕನ್ನು ರೂಪಿಸಿಕೊಂಡಿರುವ ಮೌಲಾಬಿಯವರನ್ನು ಗಣರಾಜ್ಯೋತ್ಸವಕ್ಕೆ ಆಹ್ವಾನ ನೀಡಿರುವುದು ನಮ್ಮ ಗ್ರಾಮಕ್ಕೆ ಸಂತೋಷದ ವಿಚಾರ ಎಲ್ಲಾ ಮಹಿಳೆಯರು ಕೂಡ ಈ ರೀತಿಯ ಸ್ವಾವಲಂಬಿ ಬದುಕನ್ನು ರೂಪಿಸಿಕೊಂಡಾಗ ಮಾತ್ರ ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯ ಎಂದರು

ನಂತರ ಶಿಕ್ಷಕ ಎಸ್ ರಾಮಪ್ಪ ಮಾತನಾಡಿ ಎನ್ ಆರ್ ಎಲ್ ಎಂ ಒಕ್ಕೂಟ ವ್ಯವಸ್ಥೆಯಿಂದ ದೊರೆಯುವ ಸಾಲ ಸೌಲಭ್ಯವನ್ನು ಸಮರ್ಪಕವಾಗಿ ಬಳಕೆ ಮಾಡಿಕೊಂಡು ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿರುವುದು ನಿಜವಾಗು ಹೆಮ್ಮೆಯ ಸಂಗತಿ ಈ ಮೂಲಕ ಇದು ಪ್ರತಿಯೊಬ್ಬ ಮಹಿಳೆಯರಿಗೂ ಸ್ಪೂರ್ತಿ ಎಂದರು


ಈ ಸಂದರ್ಭದಲ್ಲಿ ಪ್ರಮುಖರಾದ ಶಿವನಗೌಡ ಪಾಟೀಲ್ ಈಶ್ವರ್ ಗೌಡ ಬಿಬಿಮ್ಮ ಶಿವನೇಗೌಡರ ರಾಮು ಸುರೇಶ್ ಸೇರಿದಂತೆ ಶಿವಮಾಲಾಧಾರಿಗಳು ಶ್ರೀಮಠದ ಸದ್ಭಕ್ತರು ಇದ್ದರು



# ಐನಾಪುರ: ನಂದಿ ಬಸವೇಶ್ವರ ಜಾತ್ರೆ

**ಚಿಂಚೋಳಿ,ಜ.23–**ತಾಲೂಕಿನ ಐನಾಪೂರ್ ಗ್ರಾಮದ ನಂದಿ ಬಸವೇಶ್ವರ 18ನೇ ಜಾತ್ರಾ ಮಹೋತ್ಸವ ಜ.19 ರಿಂದ 25 ರವರೆಗೆ ನಡೆಯಲಿದ್ದು, ವಿವಿಧ ಕಾರ್ಯಕ್ರಮಗಳು ಜರುಗಲಿವೆ.

18 ರಂದು ಸಂಜೆ ರಥೋತ್ಸವ ಜರಗಲಿದ್ದು, ಕಾರ್ಯಕ್ರಮದಲ್ಲಿ 1001 ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು. ಕಾರ್ಯಕ್ರಮದಲ್ಲಿ ವಿವಿಧ ಮಠದ ಶ್ರೀಗಳು ಹಾಗೂ ರಾಜಕಾರಣಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿದ್ದಾರೆ ಎಂದು ಐನಾಪೂರ್ ಗ್ರಾಮದ ಮುಖಂಡರಾದ ರಮೇಶ ಪಡಶೆಟ್ಟಿ ತಿಳಿಸಿದ್ದಾರೆ.



ಯುವ ಮಾರ್ಗ

www.yuvamarga.com Yuva Marga yuva_marga_

# ಪ.ಪಂ.ನೂತನ ಅಧ್ಯಕ್ಷ ಹಾಜಿ ಚೌದ್ರಿ ಅವರಿಂದ ಶಾಸಕರಿಗೆ ಮತ್ತು ಮುಖಂಡರಿಗೆ ಸನ್ಮಾನ

ಯುವಮಾರ್ಗ ಸುದ್ದಿ



**ಸಿರವಾರ, ಜ.23**–ಸ್ಥಳೀಯ ಪಟ್ಟಣ ಪಂಚಾಯಿತಿಯ ನೂತನ ಅಧ್ಯಕ್ಷರಾಗಿ ಅವಿರೋಧ ವಾಗಿ ಆಯ್ಕೆಯಾದ ವಾರ್ಡ್ ನಂ. 6 ರ ಸದಸ್ಯ ನೂತನ ಅಧ್ಯಕ್ಷ ಹಾಜಿ ಚೌದ್ರಿ ಅವರು ಮಾನ್ವಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ. ಹಂಪಯ್ಯ ನಾಯ ಕ ಅವರಿಗೆ ಮತ್ತು ಪಟ್ಟಣ ಪಂಚಾಯಿತಿ ಸದಸ್ಯರಿಗೆ ಹಾಗೂ ಮುಖಂಡರಿಗೆ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸನ್ಮಾನಿಸಿ ಗೌರವಿಸಿದರು.

ಸಿರವಾರ ಪಟ್ಟಣ ಪಂಚಾಯಿತಿಗೆ ಸರ್ವಾನುಮತದಿಂದ ಅಧ್ಯಕ್ಷರನ್ನಾಗಿ ಅವಿರೋಧವಾ ಗಿ ಆಯ್ಕೆ ಮಾಡಲು ಕಾರಣಿಭೂತರಾದ ತಮ್ಮೆಲ್ಲರಿಗೂ ತುಂಬು ಹೃದಯದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಮತ್ತು ಪಟ್ಟಣದ ಅಭಿವೃದ್ಧಿಗೆ ಹಗಲಿರುಳು ತಮ್ಮ ನೇತೃತ್ವದಲ್ಲಿ ಉತ್ತಮವಾದ ರೀತಿಯಲ್ಲಿ ಕೆಲಸ ಕಾರ್ಯಗಳನ್ನು ಮಾಡುತ್ತೇನೆ ಎಂದರು. ಈ ಸಂದರ್ಭದಲ್ಲಿ ಶಾಸಕರಾದ ಜಿ. ಹಂಪಯ್ಯ ನಾಯಕ,ಚುಕ್ಕಿ ಶಿವಕುಮಾರ್, ತಾ.ಪಂ ಮಾಜಿ ಅಧ್ಯಕ್ಷ ದಾನನಗೌಡ,ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನಿರ್ಮಲಾ ಬೆಣ್ಣೆ,ಶಿವಶರಣ ಸಾಹುಕಾರ ಅರಿಕೇರಿ, ಡಾ. ಯಂಕನಗೌಡ ಬೊಮ್ಮನಾಳ,ವೈ. ಭೂಪನಗೌಡ,ಹಸೇನ್ ಅಲಿ ಸಾಬ್, ಮೌಲಾಸಾಬ್ ವರ್ಚಸ್, ಸೂರಿ ದುರುಗಣ್ಣ ನಾಯಕ,ಎಚ್. ಮಾಕಪ್ಪ,ಚನ್ನಪ್ಪ ಗಡ್ಲ, ರಂಗನಾಥ ಭೋವಿ,ನಿಂಬಯ್ಯ ಸ್ವಾಮಿ, ಎಚ್ ಕೆ ಅಮರೇಶ,ಬಡ್ಡ ಹನುಮಂತ, ಸಾವರೆಪ್ಪ,ಜೆ.ಅಬ್ರಾಹಾಂ ಹೊನ್ನಟಗಿ, ಜಯಪ್ಪ ಕೆಂಪು, ಗಡ್ಲ ಚನ್ನಬಸವ ನಾಯಕ, ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

# ನಿಯಮ ಬಾಹಿರವಾಗಿ ಒಂದೇ ಗ್ರಾಮದಲ್ಲಿ 25 ವರ್ಷ ಸೇವೆ ಸಲ್ಲಿಸುತ್ತಿರುವ ಗ್ರಾಮಲೆಕ್ಕಾಧಿಕಾರಿ ವರ್ಗಾವಣೆಗೆ ಆಗ್ರಹಿಸಿ ಮಾನ್ವಿಯಲ್ಲಿ ಸುದ್ದಿಗೋಷ್ಠಿ

ಯುವಮಾರ್ಗ ಸುದ್ದಿ





**ಮಾನ್ವಿ,ಜ.23**– ತಾಲೂಕಿನ ಬ್ಯಾಗವಾಟ ಗ್ರಾಮದಲ್ಲಿ ಕಳೆದ 25 ವರ್ಷಗಳಿಂದ ರಾಜಕೀಯ ಪ್ರಭಾವ ಬಳಸಿ ಸರ್ಕಾರಿ ನಿಯಮಗಳಿಗೆ ವಿರುದ್ಧವಾಗಿ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಗ್ರಾಮಲೆಕ್ಕಾಧಿಕಾರಿ ಚಿದಾನಂದ ರವರನ್ನು ಕೂಡಲೇ ವರ್ಗಾವಣೆ ಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧ್ಯಕ್ಷರಾದ ಕೆ.ವೈ.ಬಸವರಾಜ ನಾಯಕ ಅವರು ಒತ್ತಾಯಿಸಿದ್ದಾರೆ. ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಒಬ್ಬ ಅಧಿಕಾರಿ ಒಂದು ಸ್ಥಳದಲ್ಲಿ ಗರಿಷ್ಠ 5 ವರ್ಷಗಳ ಕಾಲ ಮಾತ್ರ ಸೇವೆ ಸಲ್ಲಿಸಬೇಕೆಂಬ ನಿಯಮವಿದ್ದರೂ ಜಿಲ್ಲಾಧಿಕಾರಿಗಳು ಇವರನ್ನು ವರ್ಗಾವಣೆ ಮಾಡದೆ ಇರುವುದು ಅನೇಕ ಅನುಮಾನಗಳಿಗೆ ದಾರಿ ಮಾಡಿಕೊಟ್ಟಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೀರ್ಘಕಾಲ ಒಂದೇ ಕಡೆ ಇರುವುದನ್ನೇ ಬಂಡವಾಳ ಮಾಡಿಕೊಂಡಿರುವ ಈ ಅಧಿಕಾರಿ, ಗ್ರಾಮಸ್ಥರಿಗೆ ಮತ್ತು ರೈತರಿಗೆ ಅಗತ್ಯವಿರುವ ಪ್ರಮಾಣಪತ್ರಗಳು ಹಾಗೂ ಮಾಸಿಕ ವೇತನದ ಅರ್ಜಿಗಳನ್ನು ನಿರಂತರವಾಗಿ ತಿರಸ್ಕರಿಸುವ ಮೂಲಕ ಜನರಿಗೆ ತೊಂದರೆ ನೀಡುತ್ತಿದ್ದಾರೆ. ವಿಶೇಷವಾಗಿ ವೃದ್ಧಾಪ್ಯ ವೇತನ, ವಿಧವಾ ವೇತನ ಮತ್ತು ವಿಕಲಚೇತನರ ವೇತನಕ್ಕಾಗಿ ದಾಖಲೆಗಳ ಸಮೇತ ಅರ್ಜಿ ಸಲ್ಲಿಸಿದರೂ, ಹಣ ನೀಡದಿದ್ದಲ್ಲಿ ಅವುಗಳನ್ನು ತಿರಸ್ಕರಿಸಲಾಗುತ್ತಿದೆ ಎಂದು ಅವರು ಗಂಭೀರವಾಗಿ ಆರೋಪಿಸಿದರು. ಇದರೊಂದಿಗೆ ನೆರೆ ಮತ್ತು ಬರ ಪರಿಹಾರ ವಿತರಣೆಯಲ್ಲಿ ತಾರತಮ್ಯ ಮಾಡುವುದು ಹಾಗೂ ಮತದಾರರ ಪಟ್ಟಿಯಿಂದ ಹೆಸರುಗಳನ್ನು ಕೈಬಿಡುವ ಮೂಲಕ ಗ್ರಾಮಸ್ಥರ ಆಕ್ರೋಶಕ್ಕೆ ಈ ಅಧಿಕಾರಿ ಗುರಿಯಾಗಿದ್ದಾರೆ.

ತಮಗೆ ಇಷ್ಟ ಬಂದ ಸಮಯದಲ್ಲಿ ಕಚೇರಿಗೆ ಬರುವುದು ಮತ್ತು ಹೋಗುವುದು ಮಾಡುತ್ತಿರುವ ಗ್ರಾಮಲೆಕ್ಕಾಧಿಕಾರಿಯ ಕಾರ್ಯವೈಖರಿಯಿಂದ ಗ್ರಾಮದ ಜನತೆ ಬೇಸತ್ತು ಹೋಗಿದ್ದಾರೆ. ಆದ್ದರಿಂದ ಜಿಲ್ಲಾಧಿಕಾರಿಗಳು ತಕ್ಷಣವೇ ಗಮನಹರಿಸಿ ಬ್ಯಾಗವಾಟ ಗ್ರಾಮದಿಂದ ಚಿದಾನಂದ ರವರನ್ನು ವರ್ಗಾವಣೆಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕು, ಒಂದು ವೇಳೆ ವರ್ಗಾವಣೆಯಾಗದಿದ್ದಲ್ಲಿ ಗ್ರಾಮಸ್ಥರೊಂದಿಗೆ ಸೇರಿ ನಿರಂತರ ಹೋರಾಟ ನಡೆಸಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

ಈ ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಗೌರವಾ ಧ್ಯಕ್ಷ ವೀರೇಶನಾಯಕ ಕೋಟ್ನೆಕಲ್, ಉರುಕುಂದನಾಯಕ, ಹೋಳೆಪ್ಪ ಉಟಕನೂರು, ಶ್ರೀಧರ ಕೋಟ್ನೆಕಲ್, ಚಂದ್ರ ಸಂಗಪೂರ್, ವೀರೇಶ ಸಂಗಪೂರ್, ಶಿವಪ್ಪ ಹರಿಜನ ಸೇರಿದಂತೆ ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

# ರಾಯಚೂರು ಉತ್ಸವ-2026ರ ವಿಶೇಷ ವೆಬ್‌ಸೈಟ್ ಲೋಕಾರ್ಪಣೆ




ಯುವಮಾರ್ಗ ಸುದ್ದಿ

**ರಾಯಚೂರು,ಜ.23**– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ರಾಯಚೂರು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಫೆ.5 ರಿಂದ ಫೆ.7ರವರೆಗೆ ರಾಯಚೂರು ಜಿಲ್ಲೆಯಲ್ಲಿ ನಿಗದಿಯಾದ ಎಡೆದೊರೆ ನಾಡು ರಾಯಚೂರು ಜಿಲ್ಲಾ ಉತ್ಸವ-2026ರ ಪ್ರಚಾರಾರ್ಥ ಸಿದ್ಧಪಡಿಸಿದ ವಿಶೇಷ ವೆಬ್‌ತಾಣವನ್ನು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಜನವರಿ 21ರಂದು ಲೋಕಾರ್ಪಣೆ ಮಾಡಿದರು.

ಉತ್ಸವದ ಪ್ರಚಾರ ಸಮಿತಿಯು ಸಿದ್ಧಪಡಿಸಿರುವ ಈ ವೆಬ್‌ತಾಣದಲ್ಲಿ ಉತ್ಸವದ ಎಲ್ಲ ಕಾರ್ಯಕ್ರಮಗಳ ಸಂಕ್ಷಿಪ್ತ ಮಾಹಿತಿ, ಛಾಯಾಚಿತ್ರಗಳು, ಪೋಸ್ಟರ್, ವಿಶೇಷ ವಿಡಿಯೋಗಳು, ಪ್ರತಿ ದಿನ ನಡೆಯುವ ವಿವಿಧ ಚಟುವಟಿಕೆಗಳ ವಿವರ ಸೇರಿದಂತೆ ಉತ್ಸವ ನಾನಾ ಕಾರ್ಯಕ್ರಮಗಳ ಮಾಹಿತಿಗಾಗಿ www.raichurutsava.com ಲಿಂಕ್ ಬಳಸಿ ವೆಬ್‌ತಾಣಕ್ಕೆ ಭೇಟಿ ನೀಡಬಹುದಾಗಿದೆ. ನಮ್ಮ ಜಿಲ್ಲೆ ಸೇರಿದಂತೆ ರಾಜ್ಯದ ಯಾವುದೇ ಕಡೆಗಳಲ್ಲಿನ ಜನತೆ ಮತ್ತು ವಿಶ್ವದ ಯಾವುದೇ ಭಾಗದಲ್ಲಿನ ಜನತೆ ಈ ವೆಬ್‌ತಾಣಕ್ಕೆ ಭೇಟಿ ನೀಡಿ ಉತ್ಸವದ ಮಾಹಿತಿ ಪಡೆಯಲು ಮತ್ತು ಉತ್ಸವದಲ್ಲಿ ಭಾಗಿಯಾಗಲು ಅನುಕೂಲವಾಗುವಂತೆ ಈ ವೆಬ್‌ಸೈಟ್ ರಚಿಸಲಾಗಿದೆ ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಸಚಿವರಿಗೆ ಮಾಹಿತಿ ನೀಡಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ್ ಕಾಂದೂ, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ತಾಲೂಕುಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕೀಶೋರ್ ಪಾಟೀಲ, ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ರೈತ ಸಂಘದ ಅಧ್ಯಕ್ಷರಾದ ಚಾಮರಸ ಪಾಟೀಲ, ರಾಜ್ಯ ನೀತಿ ಆಯೋಗದ ಸದಸ್ಯರಾದ ಡಾ.ರಝಾಕ್ ಉಸ್ತಾದ್, ಮಹಾನಗರ ಪಾಲಿಕೆಯ ಸಮಿತಿಯ ಕಾರ್ಯದರ್ಶಿ ಹಾಗೂ ಜಿಲ್ಲಾ ನೌಕರರ ಸಂಘದ ಅಧ್ಯಕ್ಷರಾದ ಕೃಷ್ಣ ಶಾವಂತಗೇರಿ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷ ರಾಣಿ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ, ತಹಸೀಲ್ದಾರರಾದ ಸುರೇಶ ವರ್ಮಾ, ಅಮರೇಶ ಬಿರಾದಾರ ಸೇರಿದಂತೆ ಇನ್ನಿತರರು ಇದ್ದರು.

# ಬಸ್ ನಿಲ್ದಾಣದಲ್ಲಿ "ಪುಸ್ತಕ ಗೂಡು", ಹಾಳ್ಯಾ ಗ್ರಾ.ಪಂ.ಕಾರ್ಯಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಶ್ಲಾಘನೆ



**ಕಲಬುರಗಿ,ಜ.23**–ವಿಜಯನಗರ ಜಿಲ್ಲೆಯ ಹಾಳ್ಯಾ ಗ್ರಾಮ ಪಂಚಾಯತ್ ಗ್ರಾಮದ ಬಸ್ ತಂಗುದಾಣದಲ್ಲಿ ಚಿಕ್ಕದಾದ ಹಾಗೂ ಚೊಕ್ಕಾದದ ಲೈಬ್ರರಿ ನಿರ್ಮಾಣ ಮಾಡಿ ಜ್ಞಾನದ ಹಸಿವು ನೀಗಿಸುವ ಕಾರ್ಯಮಾಡಿರುವುದಕ್ಕೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು ರಾಜ್ಯದಲ್ಲಿ ಓದುವ ಸಂಸ್ಕೃತಿ ಹಬ್ಬುತ್ತಿದೆ. ನಿತ್ಯದ ಬದುಕಿನಲ್ಲಿ ನಮಗೆ ಸಿಗುವ ಸಣ್ಣ ಸಣ್ಣ ಬಿಡುವಿನ ಸಮಯವನ್ನೂ ಕೂಡ ಜ್ಞಾನಾರ್ಜನೆಗೆ ಸದ್ಬಳಕೆ ಮಾಡಿಕೊಳ್ಳಬೇಕು.

ಪುಸ್ತಕ ಗೂಡು ಎಂಬ ಪರಿಕಲ್ಪನೆಯು ಈ ಓದುವ ಸಂಸ್ಕೃತಿಗೆ ಮೌಲ್ಯಯುತ ಕೊಡುಗೆ ನೀಡುತ್ತಿದೆ ಎಂದು ವರ್ಣಿಸಿದ್ದಾರೆ.

ಬಸ್ ನಿಲ್ದಾಣಗಳೆಂದರೆ ಹರಟೆ ಕಟ್ಟೆ ಎಂಬ ಕಲ್ಪನೆಯನ್ನು ದೂರಾಗಿಸಿ ಅರಿವು ಹೆಚ್ಚಿಸುವ ಸ್ಥಳವನ್ನಾಗಿಸುವ ಪ್ರಯತ್ನದಲ್ಲಿ ಯಶಸ್ವಿಯಾಗಿರುವ ವಿಜಯನಗರ ಜಿಲ್ಲೆಯ ಹಾಳ್ಯಾ ಗ್ರಾಮ ಪಂಚಾಯತಿಯ ಸೃಜನಾತ್ಮಕ ಕೆಲಸವು ಶ್ಲಾಘನೀಯ ಎಂದು ಪಂಚಾಯತಿಯನ್ನು ಅವರು ಪ್ರಶಂಸಿಸಿದ್ದಾರೆ.

ಪುಸ್ತಕಗಳು ಮುಕ್ತವಾಗಿ ಸಿಗುವ ಇಂತಹ ಪುಸ್ತಕ ಗೂಡುಗಳಲ್ಲಿನ ಪುಸ್ತಕಗಳನ್ನು ಜವಾಬ್ದಾರಿಯುತವಾಗಿ ನೋಡಿಕೊಳ್ಳುವುದು, ಮರಳಿ ಇಡುವುದು ಮತ್ತು ಓದಿ ಮುಗಿಸಿದ ತಮ್ಮಲ್ಲಿನ ಪುಸ್ತಕಗಳನ್ನು ದೇಣಿಗೆಯಾಗಿ ನೀಡುವುದನ್ನು ನಾಗರಿಕರು ತಮ್ಮ ಹೊಣೆಗಾರಿಕೆ ಎಂದು ಭಾವಿಸಿ ಸಹಕರಿಸಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಸಾರ್ವಜನಿಕರಿಗೆ ಕರೆ ನೀಡಿದ್ದಾರೆ.

ತಾವು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಸಂದರ್ಭದಿಂದಲೂ ತಮ್ಮನ್ನು ಭೇಟಿಯಾಗಲು ಬರುವ ಸಾರ್ವಜನಿಕರಿಗೆ ಹಾರ, ಹೂವಿನ ಬೊಕ್ಕೆ ತರುವ ಬದಲು ಪುಸ್ತಕ ತರುವಂತೆ ಮನವಿ ಮಾಡಿದ್ದರು. ಅಲ್ಲಿಂದ ಇಲ್ಲಿಯವರೆಗೆ ಲಕ್ಷಾಂತರ ಪುಸ್ತಕಗಳನ್ನು ಸಾರ್ವಜನಿಕರು ತಮ್ಮ ಭೇಟಿಯಲ್ಲಿ ಸಚಿವರಿಗೆ ನೀಡಿದ್ದಾರೆ. ಹಾಗೆ ಸಂಗ್ರಹವಾದ ಪುಸ್ತಕಗಳನ್ನು ರಾಜ್ಯದ ಅರಿವು ಕೇಂದ್ರಗಳಿಗೆ ಹಾಗೂ ಸಾರ್ವಜನಿಕ ಗ್ರಂಥಾಲಯಗಳಿಗೆ ರವಾನೆ ಮಾಡಲಾಗುತ್ತಿದೆ.

ಸಚಿವರ ಕರೆಗೆ ಸ್ಪಂದಿಸಿದ ಸಾರ್ವಜನಿಕರು ಅಸಂಖ್ಯಾತ ಪುಸ್ತಕಗಳನ್ನು ಉಡುಗೊರೆ ರೂಪದಲ್ಲಿ ನೀಡಿದ್ದಾರೆ. ಇದು ನಾಗರಿಕರ ಸಂವೇದನೆ ಹಾಗೂ ಪುಸ್ತಕ ಪ್ರೀತಿ ಮತ್ತು ಓದಿನ ಬಗೆಗಿನ ಅವರ ಆಸಕ್ತಿಯನ್ನು ತೋರಿಸುತ್ತಿದೆ ಎನ್ನುವುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

# ಅಂಬೇಡ್ಕರ ರಥ ಮುನ್ನಡಿಸಲು 101 ಜಾತಿಗಳು ಒಂದಾಗಬೇಕು:ಜನಾರ್ಧನ



**ಬೀದರ:ಜ.23**–ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆ ಮತ್ತು ಸಮಾನತೆಯ ಹೋರಾಟವನ್ನು ಮುಂದುವರಿಸಲು 101 ಜಾತಿಗಳು ಒಂದಾಗಿ ನಡೆಯಬೇಕೆಂದು ಮೈಸೂರು ರಂಗಾಯಣದ ಮಾಜಿ ನಿರ್ದೇಶಕ ಜನಾರ್ಧನ (ಜನ್ನಿ) ಕರೆ ನೀಡಿದರು.

ಬೆಂಗಳೂರಿನ ಗಾಂಧಿ ಭವನದ ಮಹಾದೇವ ಸಭಾಂಗಣದಲ್ಲಿ ರವಿವಾರ ಮಧ್ಯಾಹ್ನ 12ರಿಂದ ಸಂಜೆ 5ರವರೆಗೆ ಆಯೋಜಿಸಲಾಗಿದ್ದ "ಸಮಾನತೆಯ ಹಾದಿಯಲ್ಲಿ ಲಕ್ಷ್ಮೀನಾರಾಯಣ ನಾಗವಾರ ಹೋರಾಟಗಾರನ ಅಳಿಯದ ನೆನಪು" ರಾಜ್ಯಮಟ್ಟದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು. ಮೀಸಲಾತಿಗಾಗಿ ಜಾತಿಗಳ ನಡುವೆ ಸಂಘರ್ಷ ನಡೆಯುತ್ತಿರುವ ಈ ಸಂದರ್ಭದಲ್ಲಿ, ಮೀಸಲಾತಿ ತಂದುಕೊಟ್ಟ ಅಂಬೇಡ್ಕರ್ ಅವರ ರಥವನ್ನು ಮುನ್ನಡಿಸಲು ಎಲ್ಲ ಜಾತಿಗಳು ಒಂದಾಗಬೇಕೆಂದು ಅವರು ಹೇಳಿದರು. ಅಂಬೇಡ್ಕರ್ ರಚಿಸಿದ ಸಂವಿಧಾನದ ಮೂಲಕವೇ ಸಮೃದ್ಧ ಭಾರತ ಹಾಗೂ ಸಮೃದ್ಧ ವಿಶ್ವ ನಿರ್ಮಾಣ ಸಾಧ್ಯವೆಂದು ಅವರು ಅಭಿಪ್ರಾಯಪಟ್ಟರು.ಕಾರ್ಯಕ್ರಮವನ್ನು ಆಳಂದ ಶಾಸಕ ಹಾಗೂ ರಾಜ್ಯ ಯೋಜನಾ ಆಯೋಗದ ಉಪಾಧ್ಯಕ್ಷ ಶ್ರೀ ಬಿ.ಆರ್. ಪಾಟೀಲ್ ಉದ್ಘಾಟಿಸಿ, 70-80ರ ದಶಕಗಳಲ್ಲಿ ಉದಯಿಸಿದ ದಲಿತ ಚಳುವಳಿ ನಂದಿಬಸವಣ್ಣರನ್ನು ನಾಯಕನಾಗಿ ರೂಪಿಸಿದ ಕೀರ್ತಿ ದಲಿತ ಚಳುವಳಿಗೆ ಸಲ್ಲುತ್ತದೆ ಎಂದು ಹೇಳಿದರು. ಇಂದಿನ ಅನೇಕ ಸಂಘಟನೆಗಳಿಗೆ ತಾಯಿಬೇರುವಾಗಿರುವ ದಲಿತ ಚಳುವಳಿಗೆ ಪುನರ್ಚೇತನ ಅಗತ್ಯವಿದ್ದು, ವಿಭಾಗವಾರು ರಾಜ್ಯಮಟ್ಟದ ಕಾರ್ಯಕ್ರಮಗಳ ಮೂಲಕ ಸಂವಿಧಾನ ಹಾಗೂ ಸರ್ಕಾರದ ಯೋಜನೆಗಳ ಬಗ್ಗೆ ಜನರಿಗೆ ಅರಿವು ಮೂಡಿಸಬೇಕೆಂದು ಅವರು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಮಹಿಳಾ ವಿಭಾಗದ ರಾಜ್ಯ ಸಂಚಾಲಕಿ ಡಾ. ಜಾನಕಮ್ಮಾ ಲಕ್ಷ್ಮೀನಾರಾಯಣ, ಮಹಿಳಾ ಸಮಾಜಕ್ಕೆ ಆತ್ಮಗೌರವ ಹಾಗೂ ಸ್ವಾಭಿಮಾನಪೂರ್ಣ ಬದುಕನ್ನು ಸಂವಿಧಾನಾತ್ಮಕವಾಗಿ ನೀಡಿದವರು ಡಾ. ಅಂಬೇಡ್ಕರ್ ಎಂದರು.

ಕೆನರಾ ಬ್ಯಾಂಕ್ ಎಸ್‌ಸಿ/ಎಸ್‌ಟಿ ನೌಕರರ ಸಂಘದ ಅಧ್ಯಕ್ಷ ಪುರುಷೋತ್ತಮ ದಾಸ ಮಾತನಾಡಿ, ದಲಿತ ಚಳುವಳಿ ಮುನ್ನಡಿಸಲು ಸರ್ಕಾರಿ ನೌಕರರ ಪಾತ್ರ ಅತ್ಯಂತ ಅಗತ್ಯವಿದೆ ಎಂದರು. ಅವರ ಸಹಕಾರದಿಂದಲೇ ಬೆಂಗಳೂರಿನಲ್ಲಿ ಜೈ ಭೀಮ್ ಭವನ ನಿರ್ಮಾಣ ಸಾಧ್ಯವಾಯಿತೆಂದು ಅವರು ತಿಳಿಸಿದರು.

ನಿವೃತ್ತ ಪೊಲೀಸ್ ಅಧಿಕಾರಿ ಬಿ.ಕೆ. ಶಿವರಾಂ ಮಾತನಾಡಿ, ಶಾಂತಿ ಮತ್ತು ಸಮೃದ್ಧ ಸಮಾಜ ನಿರ್ಮಾಣದಲ್ಲಿ ಪೊಲೀಸ್ ಇಲಾಖೆಯ ಪಾತ್ರ ಮಹತ್ವದ್ದಾಗಿದೆ. ದ್ವೇಷದ ಬದಲು ಪ್ರೀತಿ, ಕರುಣೆ, ಸಮತೆ ಮತ್ತು ಮಮತೆ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.ಕಾರ್ಯಕ್ರಮದ ವೇದಿಕೆಯಲ್ಲಿ ಸಮಾಜವಾದಿ ಚಿಂತಕ ಅಲಿಬಾಬಾ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿಯ ಕಲಬುರಗಿ ವಿಭಾಗದ ಸಂಚಾಲಕ ಉಮೇಶಕುಮಾರ ಸೋರಳ್ಳಿಕರ್, ರಾಜ್ಯ ಸಂಘಟನಾ ಸಂಚಾಲಕ ಕಲ್ಲಪ್ಪ ಕಾಂಬಳೆ, ದೇವನಹಳ್ಳಿ ಸೋಮಶೇಖರ, ಎಫ್.ವೈ. ದೊಡ್ಡಮನಿ, ಶಿವಜ್ಞಾನಿ ಕಪ್ಪಗಲ, ಶರಣಪ್ಪ ಗುಳಬಾಳ ಉಪಸ್ಥಿತರಿದ್ದರು. ಕಾರ್ಯಕಾರಿ ರಾಜ್ಯ ಸಂಚಾಲಕ ಜೀವನಹಳ್ಳಿ ವೆಂಕಟೇಶ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಬುದ್ಧ-ಬಸವ-ಅಂಬೇಡ್ಕರ್ ಗೀತೆಗಳನ್ನು ಖ್ಯಾತ ಗಾಯಕರಿಂದ ಪ್ರಸ್ತುತಪಡಿಸಲಾಯಿತು. ಬೀದರ್ ಜಿಲ್ಲಾ ಸಂಚಾಲಕ ಬಾಬುರಾವ ಕೌಠ, ಸಾಹಿತಿ ಡಾ. ಸುಬ್ಬಣ್ಣ ಕರಕನಳ್ಳಿ, ಪಂಕಜಕುಮಾರ ಸೂರ್ಯವಂಶಿ, ವಿಜಯಕುಮಾರ, ಭೀಮರಾವ ಭಾವಿಕಟ್ಟಿ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಸಾಲಬಾಧೆಗೆ ರೈತ ಆತ್ಮಹತ್ಯೆ



**ಔರಾದ್ : ಜ.23**– ತಾಲೂಕಿನ ಉಜನಿ ಗ್ರಾಮದ ರೈತ ಸುಭಾಷ ಹಣಮಂತ ಕಾಂಬಳೆ (42) ಸಾಲದ ಬಾಧೆ ತಾಳದೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಅತಿವೃಷ್ಟಿಯಿಂದ ಹೊಲದಲ್ಲಿ ಬೆಳೆಯಲಾದ ಬೆಳೆಗಳು ಸಂಪೂರ್ಣ ಹಾಳಾಗಿದ್ದು ನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ. ಮೃತರಿಗೆ ಪತ್ನಿ, ಇಬ್ಬರು ಪುತ್ರರು ಹಾಗೂ ಪುತ್ರಿಯೊಬ್ಬಳು ಇದ್ದಾರೆ. ಉಜನಿ ಪಿಕೆಪಿಎಸ್‌ನಲ್ಲಿ 50 ಸಾವಿರ ಹಾಗೂ ನಾನಾ ಸಂಘ ಸಂಸ್ಥೆಗಳಲ್ಲಿ 2 ಲಕ್ಷ, ಸೇರಿದಂತೆ ಖಾಸಗಿ ಸಾಲವಿದೆ ಎಂದು ತಿಳಿದು ಬಂದಿದೆ. ಪತ್ನಿ ಗಂಗಮ್ಮ ದೂರಿನ ಅನ್ವಯ ಚಿಂತಾಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H